ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 139 Saturday **14-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 139 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಕ್ಕಳ ನಗುವಿನಲ್ಲಿದೆ ನಾಳಿನ ಭಾರತದ ಭವಿಷ್ಯ

ಮಕ್ಕಳ ಹಕ್ಕು, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆಗೆ ಸಮಾಜದ ಪ್ರತಿಯೊಬ್ಬರ ಬದ್ಧತೆ ಅಗತ್ಯ

"ಮುಂಜಾನೆಯ ಮೆರಗು"

ಜಗಳೂರು ನ, 13– ಇಂದಿನ ಮಕ್ಕಳು ನಾಳಿನ ಪ್ರಜೆಗಳಷ್ಟೇ ಅಲ್ಲ, ಇಂದಿನ ಸಮಾಜದ ಅಮೂಲ್ಯ ಸಂಪತ್ತು. ಅವರ ನಗು, ಮುಗ್ಧತೆ, ಕುತೂಹಲ ಹಾಗೂ ಕನಸುಗಳು ದೇಶದ ಭವಿಷ್ಯಕ್ಕೆ ಭದ್ರ ಬುನಾದಿಯಾಗಿವೆ. ಪ್ರತಿಯೊಂದು ಮಗುವಿನಲ್ಲಿಯೂ ಒಂದೊಂದು ಪ್ರತಿಭೆ ಅಡಗಿರುತ್ತದೆ. ಆ ಪ್ರತಿಭೆಯನ್ನು ಗುರುತಿಸಿ, ಪ್ರೋತ್ಸಾಹಿಸಿ, ಉತ್ತಮ ಭವಿಷ್ಯ ರೂಪಿಸುವ ಜವಾಬ್ದಾರಿ ಪೋಷಕರು, ಶಿಕ್ಷಕರು, ಸಮಾಜ ಹಾಗೂ ಸರ್ಕಾರದ ಮೇಲಿದೆ.

ಭಾರತದ ಮೊದಲ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವಾದ ನವೆಂಬರ್ 14 ಅನ್ನು ದೇಶಾದ್ಯಂತ ಮಕ್ಕಳ ದಿನವನ್ನಾಗಿ ಆಚರಿಸಲಾಗುತ್ತದೆ. ಮಕ್ಕಳ ಮೇಲಿನ ಅಪಾರ ಪ್ರೀತಿ ಮತ್ತು ಕಾಳಜಿಯಿಂದ ನೆಹರು ಅವರು ಮಕ್ಕಳಿಗೆ ಪ್ರೀತಿಯ 'ಚಾಚಾ ನೆಹರು' ಎಂದೇ ಪ್ರಸಿದ್ಧರಾಗಿದ್ದರು. ಮಕ್ಕಳೇ ದೇಶದ ನಿಜವಾದ ಸಂಪತ್ತು, ಅವರ ಬೆಳವಣಿಗೆಯಲ್ಲಿಯೇ ರಾಷ್ಟ್ರದ ಪ್ರಗತಿ ಅಡಗಿದೆ ಎಂಬ ಆಶಯದೊಂದಿಗೆ ಈ ದಿನವನ್ನು ಆಚರಿಸಲಾಗುತ್ತದೆ.

ಮಕ್ಕಳ ಹಕ್ಕುಗಳಿಗೆ ಆದ್ಯತೆ ಸಿಗಲಿ

ಪ್ರತಿಯೊಂದು ಮಗುವಿಗೂ ಶಿಕ್ಷಣ, ಆರೋಗ್ಯ, ಪೌಷ್ಟಿಕ ಆಹಾರ, ಸುರಕ್ಷಿತ ವಾತಾವರಣ ಹಾಗೂ ಸಮಾನ ಅವಕಾಶಗಳು ದೊರೆಯಬೇಕು. ಜಾತಿ, ಧರ್ಮ, ಬಡವ–ಶ್ರೀಮಂತ ಎಂಬ ಭೇದವಿಲ್ಲದೆ ಎಲ್ಲ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು. ಬಾಲ್ಯವು ಆಟ, ಪಾಠ, ಸೃಜನಶೀಲತೆ ಮತ್ತು ಸಂತೋಷದಿಂದ ಕೂಡಿರಬೇಕೇ ಹೊರತು ದುಡಿಮೆ, ಶೋಷಣೆ ಹಾಗೂ ಭಯದಿಂದ ಕೂಡಿರಬಾರದು.



ಮೊಬೈಲ್ ಜಗತ್ತಿನಲ್ಲಿ ಕಳೆದುಹೋಗುತ್ತಿರುವ ಬಾಲ್ಯ

ಆಧುನಿಕ ತಂತ್ರಜ್ಞಾನ ಮಕ್ಕಳಿಗೆ ಜ್ಞಾನದ ಹೊಸ ಬಾಗಿಲುಗಳನ್ನು ತೆರೆದಿದೆ. ಆದರೆ ಮೊಬೈಲ್, ಇಂಟರ್‌ನೆಟ್ ಮತ್ತು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯ ಮೇಲೆ ಪರಿಣಾಮ ಬೀರುತ್ತಿದೆ. ಮೈದಾನದಲ್ಲಿ ಸ್ನೇಹಿತರೊಂದಿಗೆ ಆಟವಾಡಬೇಕಾದ ಮಕ್ಕಳು ಮೊಬೈಲ್ ಆಟಗಳಲ್ಲಿ ಮುಳುಗುತ್ತಿದ್ದಾರೆ. ಪುಸ್ತಕ ಓದುವ ಹವ್ಯಾಸ, ಪ್ರಕೃತಿಯೊಂದಿಗೆ ಬೆರೆಯುವ ಆಸಕ್ತಿ ಹಾಗೂ ಕುಟುಂಬದವರೊಂದಿಗೆ ಕಳೆಯುವ ಸಮಯ ಕಡಿಮೆಯಾಗುತ್ತಿದೆ.

ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ಅಗತ್ಯ

ಗ್ರಾಮೀಣ ಭಾಗದ ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಸರ್ಕಾರಿ ಶಾಲೆಗಳೇ ಶಿಕ್ಷಣದ ಪ್ರಮುಖ ಆಸರೆಯಾಗಿವೆ. ಆದರೆ ಕೆಲವು ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಅಭಾವ, ಶೌಚಾಲಯಗಳ ಸಮಸ್ಯೆ ಹಾಗೂ ಆಟದ ಮೈದಾನಗಳ ಕೊರತೆ ಕಂಡುಬರುತ್ತಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಶಾಲೆಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಬೇಕು.

ಮಕ್ಕಳ ಪ್ರತಿಭೆಗೆ ಸಿಗಲಿ ಪ್ರೋತ್ಸಾಹ

ಪ್ರತಿಯೊಂದು ಮಗುವೂ ವೈದ್ಯ, ಎಂಜಿನಿಯರ್ ಅಥವಾ ಅಧಿಕಾರಿಯಾಗಬೇಕೆಂದಿಲ್ಲ. ಕೆಲವರಿಗೆ ಕ್ರೀಡೆಯಲ್ಲಿ ಆಸಕ್ತಿ ಇದ್ದರೆ, ಇನ್ನು ಕೆಲವರಿಗೆ ಕಲೆ, ಸಾಹಿತ್ಯ, ವಿಜ್ಞಾನ, ಸಂಗೀತ ಮತ್ತು ಕೃಷಿಯಲ್ಲಿ ಆಸಕ್ತಿ ಇರಬಹುದು. ಮಕ್ಕಳ ಆಸಕ್ತಿ ಮತ್ತು ಸಾಮರ್ಥ್ಯವನ್ನು ಗುರುತಿಸಿ ಅವರ ಆಯ್ಕೆಗೆ ಗೌರವ ನೀಡಬೇಕು. ಇತರ ಮಕ್ಕಳೊಂದಿಗೆ ಹೋಲಿಕೆ ಮಾಡಿ ಒತ್ತಡ ಹೇರುವ ಬದಲು ಅವರಲ್ಲಿರುವ ಪ್ರತಿಭೆಯನ್ನು ಬೆಳೆಸಬೇಕು.

ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವುದೇ ಪ್ರತಿಭೆಯ ಮಾನದಂಡವಲ್ಲ. ಉತ್ತಮ ಸಂಸ್ಕಾರ, ಮಾನವೀಯತೆ, ಆತ್ಮವಿಶ್ವಾಸ, ಶಿಸ್ತು ಮತ್ತು ಸಾಮಾಜಿಕ ಜವಾಬ್ದಾರಿಯೂ ಮಕ್ಕಳ ವ್ಯಕ್ತಿತ್ವದ ಪ್ರಮುಖ ಗುಣಗಳಾಗಿವೆ.

> ಮಕ್ಕಳ ಕೈಯಲ್ಲಿ ಮೊಬೈಲ್ ನೀಡುವ ಸಂಸ್ಕೃತಿಯನ್ನು ಪ್ರತಿಯೊಬ್ಬರೂ ತೊರೆದು, ಅವರ ಕೈಯಲ್ಲಿ ಪುಸ್ತಕ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ಪುಸ್ತಕ ಓದುವ ಹವ್ಯಾಸ ಮಕ್ಕಳಲ್ಲಿ ಜ್ಞಾನ, ವಿವೇಕ ಹಾಗೂ ಉತ್ತಮ ಚಿಂತನೆಗಳನ್ನು ಬೆಳೆಸುತ್ತದೆ. ಶಿಕ್ಷಣ ಮತ್ತು ಸಂಸ್ಕಾರದ ಮೂಲಕ ಬೆಳೆದ ಮಕ್ಕಳು ಸಮಾಜದಲ್ಲಿ ಆತ್ಮಗೌರವದಿಂದ ತಲೆ ಎತ್ತಿ ನಡೆಯಲು ಸಾಧ್ಯವಾಗುತ್ತದೆ.
>
> **ಡಿ.ವಿ. ನಾಗಪ್ಪ , ವಕೀಲರ ಸಂಘದ ತಾಲೂಕು ಅಧ್ಯಕ್ಷ**



> ಮಕ್ಕಳ ಕಣ್ಣಿನಲ್ಲಿ ಕಾಣುವ ಕನಸುಗಳು ನನಸಾಗಬೇಕು. ಅವರ ಕೈಯಲ್ಲಿ ಪುಸ್ತಕವಿರಬೇಕು, ಮುಖದಲ್ಲಿ ನಗುವಿರಬೇಕು, ಮನಸ್ಸಿನಲ್ಲಿ ಆತ್ಮವಿಶ್ವಾಸವಿರಬೇಕು. ಬಡತನ, ಅಜ್ಞಾನ, ಅಸಮಾನತೆ ಮತ್ತು ಶೋಷಣೆಯ ನೆರಳಿನಿಂದ ಮಕ್ಕಳನ್ನು ಹೊರತಂದು ಸಮಾನ ಅವಕಾಶಗಳನ್ನು ಕಲ್ಪಿಸಿದಾಗ ಮಾತ್ರ ಸುಂದರ ಸಮಾಜ ನಿರ್ಮಾಣ ಸಾಧ್ಯ.
>
> **ಚಿನ್ನಪ್ಪ, ಪೌರ ಕಾರ್ಮಿಕ ಸಂಘದ ತಾಲೂಕು ಅಧ್ಯಕ್ಷ**

> ಮಕ್ಕಳಿಗೆ ನಾವು ನೀಡುವ ಅತ್ಯುತ್ತಮ ಉಡುಗೊರೆ ಆಸ್ತಿ–ಅಂತಸ್ತುಗಳಲ್ಲ; ಬದಲಾಗಿ ಉತ್ತಮ ಶಿಕ್ಷಣ, ಸಂಸ್ಕಾರ, ಪ್ರೀತಿ, ಭದ್ರತೆ ಮತ್ತು ಸ್ವತಂತ್ರವಾಗಿ ಕನಸು ಕಾಣುವ ಅವಕಾಶ. ಇಂದಿನ ಮಕ್ಕಳನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಿದಾಗಲೇ ಸದೃಢ, ಸಮೃದ್ಧ ಹಾಗೂ ಅಭಿವೃದ್ಧಿಶೀಲ ಭಾರತ ನಿರ್ಮಾಣವಾಗಲು ಸಾಧ್ಯ.
>
> **ರಾಘವೇಂದ್ರ ಸಾಮಾಜಿಕ ಹೋರಾಟಗಾರ**

ಈ ಆಚರಣೆ ಸೀಮಿತವಾಗಬಾರದು. ವರ್ಷದ 365 ದಿನಗಳೂ ಮಕ್ಕಳ ಹಕ್ಕು, ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆಗೆ ಆದ್ಯತೆ ನೀಡಬೇಕು.

ಮಕ್ಕಳ ಕೈಯಲ್ಲಿ ಮೊಬೈಲ್ ಬದಲು ಪುಸ್ತಕವಿರಲಿ, ಮನಸ್ಸಿನಲ್ಲಿ ಭಯದ ಬದಲು ಆತ್ಮವಿಶ್ವಾಸವಿರಲಿ, ಬದುಕಿನಲ್ಲಿ ನಿರಾಸೆಯ ಬದಲು ಕನಸುಗಳಿರಲಿ. ಮಕ್ಕಳಿಗೆ ನಾವು ನೀಡುವ ಅತ್ಯುತ್ತಮ ಉಡುಗೊರೆ ಆಸ್ತಿ–ಅಂತಸ್ತುಗಳಲ್ಲ; ಉತ್ತಮ ಶಿಕ್ಷಣ, ಸಂಸ್ಕಾರ, ಪ್ರೀತಿ, ಭದ್ರತೆ ಮತ್ತು ಸ್ವತಂತ್ರವಾಗಿ ಕನಸು ಕಾಣುವ ಅವಕಾಶ. ಇಂದಿನ ಮಕ್ಕಳನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಿದಾಗ ಮಾತ್ರ ಸದೃಢ, ಸಮೃದ್ಧ ಹಾಗೂ ಅಭಿವೃದ್ಧಿಶೀಲ ಭಾರತ ನಿರ್ಮಾಣವಾಗಲು ಸಾಧ್ಯ.

ಪ್ರಜಾ ಸೇವಾ ಆಂದೋಲನದ ಸದುಪಯೋಗ ಪಡೆದುಕೊಳ್ಳಿ: ತಹಸೀಲ್ದಾರ್ ಗುರುಬಸವರಾಜ್

"ಮುಂಜಾನೆಯ ಮೆರಗು"

ಜಗಳೂರು, ನ.13– ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸರ್ಕಾರಿ ಸೌಲಭ್ಯಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ನ.14ರ ಶನಿವಾರ ಬೆಳಗ್ಗೆ 10.30ಕ್ಕೆ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಸೀಲ್ದಾರ್ ಗುರುಬಸವರಾಜ್ ಮನವಿ ಮಾಡಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಶುಕ್ರವಾರ ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದ ಅವರು, ಪ್ರಜಾ ಸೇವಾ ಆಂದೋಲನವು ಸರ್ಕಾರದ ಮಹತ್ವಾಕಾಂಕ್ಷೆಯ ಜನಪರ ಕಾರ್ಯಕ್ರಮವಾಗಿದೆ. ಸಾರ್ವಜನಿಕರು ತಮ್ಮ ದಿನನಿತ್ಯದ ಸರ್ಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಅವರ ಸಮಸ್ಯೆಗಳಿಗೆ ಒಂದೇ ವೇದಿಕೆಯಲ್ಲಿ ಪರಿಹಾರ ಒದಗಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು



ತಿಳಿಸಿದರು.

ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದು, ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ, ಸಾಧ್ಯವಾದಷ್ಟು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು. ಪಹಣಿ, ಖಾತೆ ಬದಲಾವಣೆ, ಜಮೀನು ದಾಖಲೆಗಳು, ವಿವಿಧ ಪ್ರಮಾಣಪತ್ರಗಳು ಹಾಗೂ ಸರ್ಕಾರದ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಸಾರ್ವಜನಿಕರು ಅಧಿಕಾರಿಗಳ ಗಮನಕ್ಕೆ ತರಬಹುದಾಗಿದೆ.

ಮುಂಜಾನೆಯ ಮೆರಗು ವರದಿಗೆ ಸ್ಪಂದನೆ

ರೈತರ ವಶದಲ್ಲಿದ್ದ ಗ್ರಾಮ ಪಂಚಾಯಿತಿ ಬೋರ್‌ವೆಲ್ ವಶಕ್ಕೆ

"ಮುಂಜಾನೆಯ ಮೆರಗು"

ಜಗಳೂರು ನ, 13– ತಾಲೂಕಿನ ಗುರುಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೆಂಕಟೇಶಪುರ ಗ್ರಾಮದಲ್ಲಿ ಗ್ರಾಮ ಪಂಚಾಯಿತಿಗೆ ಸೇರಿದ ಸಾರ್ವಜನಿಕ ಬೋರ್‌ವೆಲ್‌ನ ನೀರನ್ನು ಕೆಲ ರೈತರು ತಮ್ಮ ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳುತ್ತಿದ್ದಾರೆ ಎಂಬುದರ ಕುರಿತು 'ಗ್ರಾಮ ಪಂಚಾಯಿತಿಗೆ ಸೇರಿದ ಬೋರ್‌ವೆಲ್ ನೀರಿಗೆ ಕನ್ನ' ಎಂಬ ಶೀರ್ಷಿಕೆಯಡಿ ಶುಕ್ರವಾರ 'ಮುಂಜಾನೆಯ ಮೆರಗು' ಪತ್ರಿಕೆಯಲ್ಲಿ ಪ್ರಕಟವಾದ ವರದಿಗೆ ಅಧಿಕಾರಿಗಳು ತಕ್ಷಣ ಸ್ಪಂದಿಸಿದ್ದಾರೆ.

ಪತ್ರಿಕೆಯಲ್ಲಿ ವರದಿ ಪ್ರಕಟವಾದ ಬೆನ್ನಲ್ಲೇ ಎಚ್ಚೆತ್ತುಕೊಂಡ ತಾಲೂಕು ಪಂಚಾಯಿತಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಿ ರೈತರ ವೈಯಕ್ತಿಕ ಬಳಕೆಯಲ್ಲಿದ್ದ ಬೋರ್‌ವೆಲ್ ಅನ್ನು ಗ್ರಾಮ ಪಂಚಾಯಿತಿ ಸುಪರ್ದಿಗೆ ಪಡೆದುಕೊಳ್ಳುವಂತೆ ಕ್ರಮ ಕೈಗೊಂಡಿದ್ದಾರೆ. ಅದರಂತೆ ಗ್ರಾಮ ಪಂಚಾಯಿತಿ



ಅಧಿಕಾರಿಗಳು ಬೋರ್‌ವೆಲ್ ಅನ್ನು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಬೋರ್‌ವೆಲ್‌ಗಳು ಸಾರ್ವಜನಿಕರ ಅನುಕೂಲಕ್ಕಾಗಿ ಹಾಗೂ ಗ್ರಾಮಸ್ಥರ ಕುಡಿಯುವ ನೀರಿನ ಅಗತ್ಯ ಪೂರೈಸಲು ಮೀಸಲಾಗಿರುತ್ತವೆ. ಅವು ಯಾವುದೇ ವ್ಯಕ್ತಿಯ ಅಥವಾ ರೈತರ ವೈಯಕ್ತಿಕ ಸ್ವತ್ತಲ್ಲ. ಸಾರ್ವಜನಿಕ ಆಸ್ತಿಯನ್ನು ಖಾಸಗಿ ಉದ್ದೇಶಗಳಿಗೆ ಬಳಸಿಕೊಳ್ಳುವುದು ಸರಿಯಲ್ಲ. ಪ್ರತಿಯೊಬ್ಬರೂ ಸಾರ್ವಜನಿಕ ಸಂಪನ್ಮೂಲಗಳ ಮಹತ್ವವನ್ನು ಅರಿತುಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಎಚ್ಚರಿಕೆ ನೀಡಿದ್ದಾರೆ.

ಪ್ರಸ್ತುತ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಇಂತಹ ಸಂದರ್ಭದಲ್ಲಿ ಸಾರ್ವಜನಿಕ ಬೋರ್‌ವೆಲ್‌ಗಳ ನೀರನ್ನು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳುವುದು ಅಕ್ಷಮ್ಯ. ಸರ್ಕಾರದ ಸಾರ್ವಜನಿಕ ಸಂಪನ್ಮೂಲಗಳನ್ನು ದುರುಪಯೋಗಪಡಿಸಿಕೊಳ್ಳುವವರ ವಿರುದ್ಧ ಮುಂದಿನ ದಿನಗಳಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸೂಚನೆ ನೀಡಿದ್ದಾರೆ.

ಸಾರ್ವಜನಿಕ ಸಮಸ್ಯೆಯೊಂದನ್ನು ಪತ್ರಿಕೆ ಬೆಳಕಿಗೆ ತಂದ ಬೆನ್ನಲ್ಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ಕ್ರಮ ಕೈಗೊಂಡಿರುವುದು ಗ್ರಾಮಸ್ಥರಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಪತ್ರಿಕಾ ವರದಿಗಳು ಕೇವಲ ಸಮಸ್ಯೆಗಳನ್ನು ಬಿಂಬಿಸುವುದಷ್ಟೇ ಅಲ್ಲದೆ, ಸಂಬಂಧಪಟ್ಟ ಇಲಾಖೆಗಳ ಗಮನ ಸೆಳೆದು ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತವೆ ಎಂಬುದಕ್ಕೆ ಈ ಘಟನೆ ಸಾಕ್ಷಿಯಾಗಿದೆ.

ಮಳೆ ಕೊರತೆಯಿಂದ ಕೃಷಿ ಕೆಲಸವಿಲ್ಲದೆ ಪರದಾಟ: ವಿಬಿಜಿ ರಾಮ್‌ಜಿ ಯೋಜನೆಯಡಿ 2,350 ಕಾರ್ಮಿಕರಿಗೆ ಕೆಲಸ

ಕೆರೆ ಹೂಳೆತ್ತುವ ಕಾಮಗಾರಿಗಳಲ್ಲಿ ಕಾರ್ಮಿಕರ ಸಕ್ರಿಯ ಪಾಲ್ಗೊಳ್ಳುವಿಕೆ

"ಮುಂಜಾನೆಯ ಮೆರಗು"

ಜಗಳೂರು ನ, 13– ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಿಬಿಜಿ ರಾಮ್‌ಜಿ ಯೋಜನೆಯಡಿ ಸುಮಾರು 2,350 ಕೂಲಿ ಕಾರ್ಮಿಕರು ಕೆಲಸದಲ್ಲಿ ತೊಡಗಿಸಿಕೊಂಡಿದ್ದು, ಗ್ರಾಮೀಣ ಭಾಗದ ಕೃಷಿ ಕಾರ್ಮಿಕರಿಗೆ ಉದ್ಯೋಗದ ಆಸರೆಯಾಗಿದೆ.

ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಯೋಜನೆಯಡಿ ಕೆರೆ ಹೂಳೆತ್ತುವ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದ್ದು, ಕೂಲಿ ಕಾರ್ಮಿಕರು ಕಾಮಗಾರಿಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುತ್ತಿದ್ದಾರೆ. ಮಳೆ ಕೊರತೆಯಿಂದಾಗಿ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ಜಮೀನುಗಳಲ್ಲಿ ಕೆಲಸವಿಲ್ಲದೆ ಸಂಕಷ್ಟ ಎದುರಿಸುತ್ತಿರುವ ಗ್ರಾಮೀಣ ಕಾರ್ಮಿಕರು ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಪಡೆಯಲು ಮುಂದಾಗುತ್ತಿದ್ದಾರೆ.

ಸಾಮಾನ್ಯವಾಗಿ ಕೃಷಿ ಚಟುವಟಿಕೆಗಳು ಸ್ಥಗಿತಗೊಂಡಿರುವ ಸಂದರ್ಭದಲ್ಲಿ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರಿಗೆ ಜೀವನ ನಿರ್ವಹಣೆ ಕಷ್ಟವಾಗುತ್ತದೆ. ಇಂತಹ ಸಂದರ್ಭದಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಸ್ಥಳೀಯವಾಗಿಯೇ ಕೆಲಸ ದೊರೆಯುತ್ತಿರುವುದು ಬಡ ಹಾಗೂ ಕೂಲಿ ಕಾರ್ಮಿಕ ಕುಟುಂಬಗಳಿಗೆ ನೆರವಾಗಿದೆ. ಕೆಲಸಕ್ಕಾಗಿ ನಾ ಮುಂದು, ತಾ ಮುಂದು ಎಂಬಂತೆ ಕಾರ್ಮಿಕರು ಕಾಮಗಾರಿಗಳಲ್ಲಿ ಪಾಲ್ಗೊಳ್ಳಲು ಆಸಕ್ತಿ ತೋರುತ್ತಿರುವುದು ಕಂಡುಬರುತ್ತಿದೆ.

ಯೋಜನೆ ಸಫಲತೆಗೆ ಅಧಿಕಾರಿಗಳ ಇಚ್ಛಾಶಕ್ತಿ ಮುಖ್ಯ



ಸರ್ಕಾರ ಜಾರಿಗೆ ತರುವ ಜನಪರ ಯೋಜನೆಗಳು ಕೇವಲ ದಾಖಲೆಗಳಿಗೆ ಸೀಮಿತವಾಗದೆ ಅರ್ಹ ಫಲಾನುಭವಿಗಳಿಗೆ ತಲುಪಿದಾಗ ಮಾತ್ರ ಅವುಗಳ ನಿಜವಾದ ಉದ್ದೇಶ ಈಡೇರಲು ಸಾಧ್ಯ. ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗದ ಅಗತ್ಯವಿರುವ ಕಾರ್ಮಿಕರಿಗೆ ಸಮರ್ಪಕವಾಗಿ ಕೆಲಸ ಒದಗಿಸುವುದು, ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಹಾಗೂ ಕೂಲಿ ಪಾವತಿಯಲ್ಲಿ ವಿಳಂಬವಾಗದಂತೆ ನೋಡಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ.

ಜಗಳೂರು ತಾಲೂಕಿನಲ್ಲಿ ವಿಬಿಜಿ ರಾಮ್‌ಜಿ ಯೋಜನೆಯಡಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿಗಳು ನಡೆಯುತ್ತಿದ್ದು, ಗ್ರಾಮೀಣ ಕಾರ್ಮಿಕರಿಗೆ ಸ್ಥಳೀಯವಾಗಿಯೇ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಯೋಜನೆ ಸಹಕಾರಿಯಾಗಿದೆ.

ತಾಂತ್ರಿಕ ಕಾರಣಗಳಿಂದ ಕೂಲಿ ಪಾವತಿಯಲ್ಲಿ ವಿಳಂಬ

ಯೋಜನೆಯಡಿ ಕೆಲಸ ನಿರ್ವಹಿಸಿದ ಕೂಲಿ ಕಾರ್ಮಿಕರ ವೇತನವನ್ನು ಅವರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. ಆದರೆ ಕೆಲವೊಮ್ಮೆ ತಾಂತ್ರಿಕ ಸಮಸ್ಯೆಗಳಿಂದಾಗಿ ಕೂಲಿ ಹಣ ಜಮೆಯಾಗಲು ಕೆಲವು ದಿನಗಳ ವಿಳಂಬವಾಗುತ್ತಿರುವುದು ಕಂಡುಬಂದಿದೆ. ಇಂತಹ ಸಮಸ್ಯೆಗಳನ್ನು ಸರಿಪಡಿಸಿ ಮುಂದಿನ ದಿನಗಳಲ್ಲಿ ಕಾರ್ಮಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ತಿಳಿಸಿದ್ದಾರೆ.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ವಿಶ್ವಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ಚಿನ್ನದ ಪದಕ ಗೆದ್ದ ರಾಜನಹಳ್ಳಿಯ ಚಾಣಕ್ಯ: ಶಾಸಕ ಬಿ.ಪಿ. ಹರೀಶ್ ಅವರಿಂದ ಸನ್ಮಾನ

"ಮುಂಜಾನೆಯ ಮೆರಗು"

ಹರಿಹರ ನ, 13– ತಾಲೂಕಿನ ರಾಜನಹಳ್ಳಿ ಗ್ರಾಮದ ಯುವ ಪ್ರತಿಭೆ ಕು. ಚಾಣಕ್ಯ ಅವರು ಬೆಂಗಳೂರಿನ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ವಿಶ್ವಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ಚಿನ್ನದ ಪದಕ ಗೆದ್ದು ಗ್ರಾಮಕ್ಕೆ ಹಾಗೂ ತಾಲೂಕಿಗೆ ಕೀರ್ತಿ ತಂದಿದ್ದಾರೆ.

ಈ ಸಾಧನೆಯ ಹಿನ್ನೆಲೆಯಲ್ಲಿ ಶಾಸಕ ಬಿ.ಪಿ. ಹರೀಶ್ ಅವರು ರಾಜನಹಳ್ಳಿ ಗ್ರಾಮದಲ್ಲಿರುವ ಚಾಣಕ್ಯ ಅವರ ನಿವಾಸಕ್ಕೆ ಭೇಟಿ ನೀಡಿ, ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸಾಧನೆ ಮಾಡಿರುವ ಚಾಣಕ್ಯ ಅವರ ಶಾಸಕರು, ಕ್ರೀಡಾ ಕ್ಷೇತ್ರದಲ್ಲಿ ವಿಶ್ವಮಟ್ಟದ ಪ್ರತಿಭೆ ಮತ್ತು ಪರಿಶ್ರಮ ಶ್ಲಾಘನೀಯ. ಕಿರಿಯ ವಯಸ್ಸಿನಲ್ಲಿಯೇ ಇಂತಹ ಸಾಧನೆ ಮಾಡಿರುವುದು ಇತರ ಯುವ ಕ್ರೀಡಾಪಟುಗಳಿಗೂ ಸ್ಫೂರ್ತಿಯಾಗಿದೆ. ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಸಾಧನೆ ಮಾಡಿ ದೇಶಕ್ಕೆ ಕೀರ್ತಿ ತರಲಿ ಎಂದು ಶುಭ ಹಾರೈಸಿದರು.

ಚಾಣಕ್ಯ ಅವರು ರಾಜನಹಳ್ಳಿ ಗ್ರಾಮದ ಆತ್ಮೀಯರು ಹಾಗೂ ಬೂತ್ ಅಧ್ಯಕ್ಷರಾದ ನಾಗರಾಜ್ ಅವರ ಪುತ್ರರಾಗಿದ್ದಾರೆ.

ಈ ಸಂದರ್ಭದಲ್ಲಿ ಮುಖಂಡರಾದ ಗಣೇಶ್, ಬಸವರಾಜ್, ಬೂತ್ ಅಧ್ಯಕ್ಷ ಮಾರುತಿ ಹಾಗೂ ಅರುಣ್ ಉಪಸ್ಥಿತರಿದ್ದರು.

ನರೇಂದ್ರ ಮೋದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಂದ ಆತ್ಮೀಯ ಸ್ವಾಗತ

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ಕರ್ನಾಟಕಕ್ಕೆ ಆಗಮಿಸಿದ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗೌರವಾನ್ವಿತ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರೊಂದಿಗೆ ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು.



ಬೆಂಗಳೂರಿಗೆ ಆಗಮಿಸಿದ ಪ್ರಧಾನಮಂತ್ರಿಗಳನ್ನು ವಿಮಾನ ನಿಲ್ದಾಣದಲ್ಲಿ ಗಣ್ಯರ ಸಮ್ಮುಖದಲ್ಲಿ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರು ಪ್ರಧಾನಮಂತ್ರಿಗಳಿಗೆ ಶುಭಾಶಯ ಕೋರಿ ಸ್ವಾಗತಿಸಿದರು.

ಪ್ರಧಾನಮಂತ್ರಿಗಳ ಕರ್ನಾಟಕ ಭೇಟಿಯ ಹಿನ್ನೆಲೆಯಲ್ಲಿ ರಾಜ್ಯದ ರಾಜಕೀಯ ಹಾಗೂ ಆಡಳಿತ ವಲಯದಲ್ಲಿ ಗಮನ ಸೆಳೆದಿದ್ದು, ಅವರ ಕಾರ್ಯಕ್ರಮಗಳ ಕುರಿತು ಸಾರ್ವಜನಿಕರಲ್ಲಿ ಕುತೂಹಲ ಮೂಡಿದೆ.

ರಾಜ್ಯಕ್ಕೆ 7.5 ಲಕ್ಷ ಕೋಟಿ ಹೂಡಿಕೆ, 20 ಲಕ್ಷ ಉದ್ಯೋಗ ಸೃಷ್ಟಿ ಗುರಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ಕರ್ನಾಟಕವನ್ನು ಜಾಗತಿಕ ಹೂಡಿಕೆಯ ಪ್ರಮುಖ ತಾಣವನ್ನಾಗಿ ರೂಪಿಸುವ ಉದ್ದೇಶದಿಂದ 2027ರ ಏಪ್ರಿಲ್ 20ರಿಂದ 22ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ 'ಇನ್ವೆಸ್ಟ್ ಕರ್ನಾಟಕ 2027 – ಜಾಗತಿಕ ಹೂಡಿಕೆದಾರರ ಸಮಾವೇಶ'ದ ಪೂರ್ವಭಾವಿ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನಲ್ಲಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಕರ್ನಾಟಕವು ದೇಶದ ಪ್ರಮುಖ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ಪ್ರಮುಖ ರಾಜ್ಯಗಳ ಪೈಕಿ ಅತ್ಯಧಿಕ ತಲಾ ಆದಾಯ ಹೊಂದಿದೆ. ಶೇ.8ರಷ್ಟು ಆರ್ಥಿಕ ಬೆಳವಣಿಗೆ, 1,100ಕ್ಕೂ ಹೆಚ್ಚು ಜಾಗತಿಕ ಸಾಮರ್ಥ್ಯ ಕೇಂದ್ರಗಳು (ಜಿಸಿಸಿ) ಹಾಗೂ ದೇಶದ ಒಟ್ಟು ಸಾಫ್ಟ್‌ವೇರ್ ರಫ್ತಿನಲ್ಲಿ ಶೇ.40ಕ್ಕೂ ಅಧಿಕ ಪಾಲು ಹೊಂದಿರುವುದು ರಾಜ್ಯದ ಹೂಡಿಕೆ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ರಾಜ್ಯದ ಕೈಗಾರಿಕಾ ನೀತಿ 2025–30ರ ಮೂಲಕ 2030ರ ವೇಳೆಗೆ 7.5 ಲಕ್ಷ ಕೋಟಿ ಹೂಡಿಕೆ ಆಕರ್ಷಿಸುವುದರ ಜೊತೆಗೆ 20 ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ. ಹೂಡಿಕೆದಾರರಿಗೆ ಅನುಕೂಲಕರ ನೀತಿಗಳು, ಸರಳೀಕೃತ ಅನುಮತಿ ಪ್ರಕ್ರಿಯೆ, ವಿಶೇಷ ಪ್ರೋತ್ಸಾಹಧನ ಹಾಗೂ ಹೂಡಿಕೆ ಸೌಲಭ್ಯಗಳ ಮೂಲಕ ಉದ್ಯಮಗಳ ಬೆಳವಣಿಗೆಗೆ ಪೂರಕ ವಾತಾವರಣ ನಿರ್ಮಿಸಲಾಗುತ್ತಿದೆ ಎಂದರು.

ಅಭಿವೃದ್ಧಿ ಕೇವಲ ಬೆಂಗಳೂರಿಗೆ ಸೀಮಿತವಾಗದೆ ರಾಜ್ಯದ ಎಲ್ಲ ಭಾಗಗಳಿಗೂ ತಲುಪಬೇಕು ಎಂಬ ಉದ್ದೇಶದಿಂದ ಮೈಸೂರು, ಮಂಗಳೂರು, ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ತುಮಕೂರು ಹಾಗೂ ಕಲಬುರಗಿಯಲ್ಲಿ ಕೈಗಾರಿಕಾ ಮತ್ತು ನಾವೀನ್ಯತಾ ಕ್ಲಸ್ಟರ್‌ಗಳನ್ನು ಬಲಪಡಿಸಲಾಗುತ್ತಿದೆ. ಇದರಿಂದ ಪ್ರಾದೇಶಿಕ ಮಟ್ಟದಲ್ಲಿಯೂ ಹೂಡಿಕೆ ಹಾಗೂ ಉದ್ಯೋಗಾವಕಾಶಗಳು ಹೆಚ್ಚಲಿವೆ ಎಂದು ಹೇಳಿದರು.

ವಿಮಾನಯಾನ ಮತ್ತು ರಕ್ಷಣಾ ವಲಯ, ಸೆಮಿಕಂಡಕ್ಟರ್, ಜವಳಿ, ಕೃತಕ ಬುದ್ಧಿಮತ್ತೆ (ಎಐ), ಸ್ವಚ್ಛ ಇಂಧನ ಹಾಗೂ ಭವಿಷ್ಯದ ಸಾರಿಗೆ ತಂತ್ರಜ್ಞಾನ ಸೇರಿದಂತೆ



ವಿವಿಧ ಕ್ಷೇತ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರಲು ಸಿದ್ಧವಾಗಿದೆ ಎಂದು ತಿಳಿಸಿದರು.

ಭಾರತ ಸೇರಿದಂತೆ ವಿಶ್ವದ ವಿವಿಧ ಭಾಗಗಳ ಹೂಡಿಕೆದಾರರು ತಮ್ಮ ಬಂಡವಾಳ, ತಂತ್ರಜ್ಞಾನ, ನವೀನ ಆಲೋಚನೆ ಹಾಗೂ ಸಹಭಾಗಿತ್ವದೊಂದಿಗೆ ಕರ್ನಾಟಕಕ್ಕೆ ಆಗಮಿಸಿ ರಾಜ್ಯದ ಅಭಿವೃದ್ಧಿಯಲ್ಲಿ ಪಾಲುದಾರರಾಗಬೇಕು. ನಾವೀನ್ಯತೆ, ಸುಸ್ಥಿರ ಬೆಳವಣಿಗೆ ಮತ್ತು ಸಮೃದ್ಧಿಯ ಹೊಸ ಅವಕಾಶಗಳನ್ನು ಸೃಷ್ಟಿಸಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಆಹ್ವಾನ ನೀಡಿದರು.

'ಇನ್ವೆಸ್ಟ್ ಕರ್ನಾಟಕ 2027' ಸಮಾವೇಶವು ಏಪ್ರಿಲ್ 20ರಿಂದ 22ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದ್ದು, ಜಾಗತಿಕ ಹೂಡಿಕೆದಾರರನ್ನು ರಾಜ್ಯದತ್ತ ಆಕರ್ಷಿಸುವ ಪ್ರಮುಖ ವೇದಿಕೆಯಾಗಲಿದೆ.

ಹರಿಹರದ ಅಂಬೇಡ್ಕರ್ ಪಾರ್ಕ್ ಪ್ರದೇಶಕ್ಕೆ ಶಾಸಕ ಬಿ.ಪಿ. ಹರೀಶ್ ಭೇಟಿ: ಸ್ವಚ್ಛತೆಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ

"ಮುಂಜಾನೆಯ ಮೆರಗು"

ಹರಿಹರ ನ, 13– ನಗರದ ಹೆಚ್.ಎಸ್. ಬಡಾವಣೆಯ ಅಂಬೇಡ್ಕರ್ ಪಾರ್ಕ್ ಸುತ್ತಮುತ್ತ ಸ್ವಚ್ಛತೆ ಕಾಪಾಡುವಲ್ಲಿ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂಬ ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಶಾಸಕ ಬಿ.ಪಿ. ಹರೀಶ್ ಅವರು ಇಂದು ಬೆಳಿಗ್ಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ನಗರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ್ ಅವರೊಂದಿಗೆ ಸ್ಥಳಕ್ಕೆ ತೆರಳಿದ ಶಾಸಕರು, ಚರಂಡಿಗಳಲ್ಲಿ ಸ್ವಚ್ಛತೆಯ ಕೊರತೆ ಹಾಗೂ ಅಲ್ಲಲ್ಲಿ ಕಸ ಸಂಗ್ರಹವಾಗಿರುವುದನ್ನು ಗಮನಿಸಿದರು. ಸಾರ್ವಜನಿಕರಿಗೆ ತೊಂದರೆಯಾಗದಂತೆ ತಕ್ಷಣವೇ ಕಸ ತೆರವುಗೊಳಿಸಿ, ಚರಂಡಿಗಳನ್ನು ಸ್ವಚ್ಛಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಸ್ವಚ್ಛತೆ ಕಾಪಾಡುವುದು ನಗರಸಭೆಯ ಪ್ರಮುಖ ಜವಾಬ್ದಾರಿಯಾಗಿದ್ದು, ಸಾರ್ವಜನಿಕರಿಂದ ಬರುವ ದೂರುಗಳಿಗೆ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕು. ಸ್ವಚ್ಛತಾ ಕಾರ್ಯದಲ್ಲಿ ನಿರ್ಲಕ್ಷ್ಯ ತೋರದೆ, ವಾರ್ಡ್‌ಗಳಲ್ಲಿ ನಿಯಮಿತವಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳುವಂತೆ ಶಾಸಕರು ಸೂಚಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ನಜೀರ್, ನಾಗರಾಜ್, ಅಂಬಾಸ ಹಂಸಾಗರ್, ಅಣ್ಣಪ್ಪ, ಮೇಹಬೂಬ್ ಸಾಬ್, ಪೌರ ಕಾರ್ಮಿಕರು ಹಾಗೂ ನಗರಸಭೆ ಸಿಬ್ಬಂದಿ ಉಪಸ್ಥಿತರಿದ್ದರು.

ವಿಶ್ವದಾಖಲೆ ಬರೆದ ಪುಟ್ಟ ಸಾಧಕ ಅನುಜ್ ಬೆಳಗಾವ್ಕರ್‌ಗೆ ಮಾಜಿ ಸಚಿವೆ, ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಂದ ಆತ್ಮೀಯ ಸನ್ಮಾನ

"ಮುಂಜಾನೆಯ ಮೆರಗು"

ಬೆಳಗಾವಿ ನ, 13– ಕೇವಲ ಒಂಬತ್ತು ವರ್ಷದ ವಯಸ್ಸಿನಲ್ಲಿಯೇ ಸ್ಕೇಟಿಂಗ್ ಕ್ರೀಡೆಯಲ್ಲಿ ಅಸಾಧಾರಣ ಸಾಧನೆ ಮಾಡಿ ವಿಶ್ವದ ಗಮನ ಸೆಳೆದಿರುವ ಪುಣೆಯ ಅಭಿನವ ಆಂಗ್ಲ ಮಾಧ್ಯಮ ಶಾಲೆಯ ಮೂರನೇ ತರಗತಿ ವಿದ್ಯಾರ್ಥಿ ಅನುಜ್ ಶ್ರೀಕಾಂತ್ ಬೆಳಗಾವ್ಕರ್ ಅವರನ್ನು ಮಾಜಿ ಸಚಿವೆ ಹಾಗೂ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಆತ್ಮೀಯವಾಗಿ ಸನ್ಮಾನಿಸಿ, ಮುಂದಿನ ಸಾಧನೆಗಳಿಗೆ ಶುಭ ಹಾರೈಸಿದರು.

ಬೆಳಗಾವಿ ಜಿಲ್ಲೆಯ ಅತಿವಾಡ ಗ್ರಾಮದ ಬೆಳಗಾವ್ಕರ್ ಕುಟುಂಬದ ಹೆಮ್ಮೆಯ ಕುಡಿಯಾಗಿರುವ ಅನುಜ್, ಶ್ರೀ ಮಾರುತಿ ಸಾತೇರಿ ಬೆಳಗಾವ್ಕರ್ ಅವರ ಮೊಮ್ಮಗ. ಚಿಕ್ಕ ವಯಸ್ಸಿನಲ್ಲಿಯೇ ಸ್ಕೇಟಿಂಗ್ ಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸಿರುವ ಈ ಬಾಲಕ ಹಲವು ದಾಖಲೆಗಳನ್ನು ನಿರ್ಮಿಸುವ ಮೂಲಕ ಗ್ರಾಮ, ಜಿಲ್ಲೆ ಹಾಗೂ ರಾಜ್ಯದ ಕೀರ್ತಿಯನ್ನು ಹೆಚ್ಚಿಸಿದ್ದಾನೆ.

ಬೆಳಗಾವಿಯ ಶಿವಗಂಗಾ ರೋಲರ್ ಸ್ಕೇಟ್ ಮೈದಾನದಲ್ಲಿ ಒಳಚಕ್ರದ



ಸ್ಕೇಟುಗಳ ಮೇಲೆ 100 ಮೀಟರ್ ದೂರವನ್ನು ಹಿಮ್ಮುಖವಾಗಿ ಕೇವಲ 17.93 ಸೆಕೆಂಡುಗಳಲ್ಲಿ ಕ್ರಮಿಸುವ ಮೂಲಕ ಅನುಜ್ ಗಿನ್ನೆಸ್ ವಿಶ್ವದಾಖಲೆ ನಿರ್ಮಿಸಿದ್ದಾನೆ.

ಇದಲ್ಲದೆ, ಎಂಟು ಚಕ್ರಗಳ ಮೇಲೆ ಪ್ರದಕ್ಷಿಣಾಕಾರವಾಗಿ 80 ಸುತ್ತು ಹಾಗೂ ಅಪ್ರದಕ್ಷಿಣಾಕಾರವಾಗಿ 80 ಸುತ್ತುಗಳನ್ನು ಕೇವಲ ಎಂಟು ನಿಮಿಷಗಳಲ್ಲಿ ಪೂರ್ಣಗೊಳಿಸಿ ರಾಷ್ಟ್ರೀಯ ಮಟ್ಟದ ದಾಖಲೆಯನ್ನೂ ಮಾಡಿದ್ದಾನೆ.

ಅಲ್ಲದೆ, ಸತತ 79 ನಿಮಿಷಗಳ ಕಾಲ ವಿರಾಮವಿಲ್ಲದೆ ಸ್ಕೇಟಿಂಗ್ ಮಾಡುವ ಮೂಲಕ ಅಮೆರಿಕದ ದಾಖಲೆ ಪುಸ್ತಕ, ವಿಶ್ವಸಂಸ್ಥೆ ಹಾಗೂ ಜೀನಿಯಸ್ ವಿಶ್ವದಾಖಲೆ ಪುಸ್ತಕಗಳಲ್ಲಿ ತನ್ನ ಸಾಧನೆಯನ್ನು ದಾಖಲಿಸಿರುವುದಾಗಿ ತಿಳಿಸಲಾಗಿದೆ.

ಅನುಜ್‌ನ ಈ ಸಾಧನೆಗೆ ತರಬೇತುದಾರ ಶೇಖರ್ ಥೋರಾಟ್ ಅವರ ಮಾರ್ಗದರ್ಶನ ಹಾಗೂ ಕುಟುಂಬದವರ ನಿರಂತರ ಪ್ರೋತ್ಸಾಹ ಪ್ರಮುಖ ಕಾರಣವಾಗಿದೆ. ಕಠಿಣ ಪರಿಶ್ರಮ, ಶಿಸ್ತು ಮತ್ತು ನಿರಂತರ ಅಭ್ಯಾಸದಿಂದ ಇಂತಹ ಸಾಧನೆ ಸಾಧ್ಯವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವೆ ಹಾಗೂ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರು, ಪುಟ್ಟ ವಯಸ್ಸಿನಲ್ಲಿಯೇ ವಿಶ್ವಮಟ್ಟದಲ್ಲಿ ಸಾಧನೆ ಮಾಡಿರುವ ಅನುಜ್‌ನ ಪ್ರತಿಭೆ ಮತ್ತು ಪರಿಶ್ರಮ ಶ್ಲಾಘನೀಯ. ಇಂತಹ ಮಕ್ಕಳು ನಮ್ಮ ನಾಡಿನ ಹೆಮ್ಮೆ. ಕ್ರೀಡಾ ಕ್ಷೇತ್ರದಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆದು ದೇಶದ ಕೀರ್ತಿಯನ್ನು ಜಾಗತಿಕ ಮಟ್ಟದಲ್ಲಿ ಹೆಚ್ಚಿಸಲಿ ಎಂದು ಹಾರೈಸಿದರು.

ಅನುಜ್‌ನ ಸಾಧನೆಯಿಂದ ಅತಿವಾಡ ಗ್ರಾಮ ಮಾತ್ರವಲ್ಲದೆ ಬೆಳಗಾವಿ ಜಿಲ್ಲೆ ಹಾಗೂ ಕರ್ನಾಟಕದ ಜನರು ಹೆಮ್ಮೆಪಡುವಂತಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ವಿಶ್ವಮಟ್ಟದ ಸಾಧನೆಗಳನ್ನು ಮಾಡುವ ಮೂಲಕ ಕ್ರೀಡಾ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಲಿ ಎಂದು ಶುಭ ಹಾರೈಸಿದರು.

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬೆಂಗಳೂರಿನಲ್ಲಿ ಗೌರವಪೂರ್ವಕ ಸ್ವಾಗತ

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ರಾಜ್ಯಕ್ಕೆ ಭೇಟಿ ನೀಡಿದ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಇಂದು ಬೆಂಗಳೂರಿನಲ್ಲಿ ಗಣ್ಯರ ಸಮ್ಮುಖದಲ್ಲಿ ಗೌರವಪೂರ್ವಕವಾಗಿ ಸ್ವಾಗತ ಕೋರಲಾಯಿತು.



ಈ ಕುರಿತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಂತಸ ವ್ಯಕ್ತಪಡಿಸಿದ್ದು, ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಹಾಗೂ ಕರ್ನಾಟಕದ ಸಮಗ್ರ ಪ್ರಗತಿಗೆ ನಿರಂತರ ಬೆಂಬಲ ನೀಡುತ್ತಿರುವ ಪ್ರಧಾನಮಂತ್ರಿಗಳಿಗೆ ರಾಜ್ಯದ ಜನತೆ ಮತ್ತು ಬಿಜೆಪಿ ಕಾರ್ಯಕರ್ತರ ಪರವಾಗಿ ಆತ್ಮೀಯ ಸ್ವಾಗತ ಕೋರಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಆಗಮನದ ಸಂದರ್ಭದಲ್ಲಿ ರಾಜ್ಯಪಾಲರಾದ ಡಾ. ಸುಧಾ ಯಾದವ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವರಾದ ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹಾಗೂ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪ್ರಧಾನಿಯವರ ರಾಜ್ಯ ಭೇಟಿಯ ಹಿನ್ನೆಲೆಯಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರಲ್ಲಿ ಉತ್ಸಾಹದ ವಾತಾವರಣ ಕಂಡುಬಂದಿತು. ರಾಜ್ಯದ ಅಭಿವೃದ್ಧಿ ಹಾಗೂ ವಿವಿಧ ವಿಚಾರಗಳ ಕುರಿತು ಈ ಭೇಟಿ ಮಹತ್ವ ಪಡೆದಿದೆ.

ರಸ್ತೆಯುದ್ದಕ್ಕೂ ಕೇಸರಿ ಧ್ವಜಗಳ ಹಾರಾಟ, ಮೋದಿ ಪರ ಘೋಷಣೆಗಳ ಮೊಳಗು

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿಗೆ ಆಗಮಿಸಿದ ಹಿನ್ನೆಲೆಯಲ್ಲಿ ನಗರದಾದ್ಯಂತ ಸಂಭ್ರಮದ ವಾತಾವರಣ ಕಂಡುಬಂದಿತು. ಪ್ರಧಾನಿಯವರನ್ನು ಸ್ವಾಗತಿಸಲು ರಸ್ತೆಯುದ್ದಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಜಮಾಯಿಸಿ, ಕೇಸರಿ ಧ್ವಜಗಳನ್ನು ಹಿಡಿದು ಹರ್ಷ ವ್ಯಕ್ತಪಡಿಸಿದರು.



ಪ್ರಧಾನಿ ಮೋದಿ ಅವರ ಆಗಮನದ ವೇಳೆ ಜನರು ಮೋದಿ ಪರ ಘೋಷಣೆಗಳನ್ನು ಕೂಗುವ ಮೂಲಕ ತಮ್ಮ ಅಭಿಮಾನ ವ್ಯಕ್ತಪಡಿಸಿದರು. ಅದರಲ್ಲೂ 'ಮೋದಿ ಕಹೀಂ ನಹೀಂ ಜಾಯೇಗಾ' ಎಂಬ ಘೋಷಣೆಗಳು ಮೊಳಗಿದವು.

ನಗರದ ಪ್ರಮುಖ ರಸ್ತೆಗಳಲ್ಲಿ ಕೇಸರಿ ಧ್ವಜಗಳು ರಾರಾಜಿಸಿದ್ದು, ಜನರ ಉತ್ಸಾಹ ಮತ್ತು ಸಂಭ್ರಮ ಸ್ವಾಗತ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಪ್ರಧಾನಿ ನರೇಂದ್ರ ಮೋದಿ ಅವರ ಮೇಲಿನ ಪ್ರೀತಿ ಮತ್ತು ವಿಶ್ವಾಸವನ್ನು ಜನರು ತಮ್ಮ ಸ್ವಾಗತದ ಮೂಲಕ ವ್ಯಕ್ತಪಡಿಸಿದರು.

ವಾಲ್ಮೀಕಿಯವರ ಆದರ್ಶಗಳು ದಾರಿದೀಪ: ಸಚಿವ ಸತೀಶ್ ಜಾರಕಿಹೊಳಿ

"ಮುಂಜಾನೆಯ ಮೆರಗು"

ಕೊಪ್ಪಳ ನ, 13– ಮಹರ್ಷಿ ವಾಲ್ಮೀಕಿಯವರ ಚಿಂತನೆಗಳು ಹಾಗೂ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಅವರ ಜೀವನ ಮೌಲ್ಯಗಳು ಮತ್ತು ಸಮಾನತೆಯ ಸಂದೇಶವನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಸೌಹಾರ್ದತೆ, ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಸಮಾಜ ನಿರ್ಮಾಣಕ್ಕೆ



ಕೈಜೋಡಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಕರೆ ನೀಡಿದರು.

ನಗರದಲ್ಲಿ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿಯವರ ಆದರ್ಶಗಳು ಕೇವಲ ಒಂದು ಕಾಲಘಟ್ಟಕ್ಕೆ ಸೀಮಿತವಾಗಿಲ್ಲ. ಅವರ ಚಿಂತನೆಗಳು ಇಂದಿನ ಸಮಾಜಕ್ಕೂ ಪ್ರಸ್ತುತವಾಗಿದ್ದು, ಮಾನವೀಯ ಮೌಲ್ಯಗಳು, ಸಮಾನತೆ ಮತ್ತು ಸೌಹಾರ್ದತೆಯ ಮಹತ್ವವನ್ನು ಸಾರುತ್ತವೆ. ಸಮಾಜದಲ್ಲಿ ಪ್ರತಿಯೊಬ್ಬರ

ಬೆಂಗಳೂರಿನ ಮೆಟ್ರೋ ಸಂಪರ್ಕ ಜಾಲಕ್ಕೆ ಮತ್ತಷ್ಟು ಬಲ: ಗುಲಾಬಿ ಮಾರ್ಗದ ಎತ್ತರಿಸಿದ ಸಂಚಾರಕ್ಕೆ ಪ್ರಧಾನಿ ಮೋದಿ ಹಸಿರು ನಿಶಾನೆ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಮೆಟ್ರೋದಲ್ಲಿ ಪ್ರಯಾಣಿಸಿದ ಪ್ರಧಾನಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ಸಿಲಿಕಾನ್ ಸಿಟಿ ಬೆಂಗಳೂರಿನ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಹಾಗೂ ನಗರದ ಸಂಚಾರ ದಟ್ಟಣೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿ ನಮ್ಮ ಮೆಟ್ರೋದ ಗುಲಾಬಿ ಮಾರ್ಗದ ಎತ್ತರಿಸಿದ ಮಾರ್ಗದ ಸಂಚಾರಕ್ಕೆ ಚಾಲನೆ ನೀಡಲಾಯಿತು.

ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ರಾಜ್ಯಪಾಲರಾದ ಡಾ. ಸುಧಾ ಯಾದವ್ ಅವರು ಕಾಳೇನ ಅಗ್ರಹಾರದಿಂದ ಎಸ್.ಜಿ. ಪಾಳ್ಯವರೆಗಿನ ಗುಲಾಬಿ ಮಾರ್ಗದ ಎತ್ತರಿಸಿದ ಮೆಟ್ರೋ ಸಂಚಾರಕ್ಕೆ ಹಸಿರು ನಿಶಾನೆ ತೋರಿದರು. ಈ ಮೂಲಕ ಬೆಂಗಳೂರಿನ ಮೆಟ್ರೋ ಸಂಪರ್ಕ ವ್ಯವಸ್ಥೆಗೆ ಮತ್ತೊಂದು ಪ್ರಮುಖ ಸೇರ್ಪಡೆಯಾದಂತಾಗಿದೆ.



ಚಾಲನೆ ನೀಡಿದ ಬಳಿಕ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಗಣ್ಯರು ಎಸ್.ಜಿ. ಪಾಳ್ಯ ಮೆಟ್ರೋ ನಿಲ್ದಾಣದಿಂದ ಬಿಳೇಕಹಳ್ಳಿ–ಐಐಎಂಬಿ ಮೆಟ್ರೋ ನಿಲ್ದಾಣದವರೆಗೆ ಮೆಟ್ರೋದಲ್ಲಿ ಪ್ರಯಾಣಿಸಿದರು. ಈ ವೇಳೆ ಮಾರ್ಗದ ಸೌಲಭ್ಯಗಳು, ಪ್ರಯಾಣಿಕರ ಅನುಕೂಲ ಹಾಗೂ ಮೆಟ್ರೋ ಸಂಪರ್ಕದ ಕುರಿತು ಮಾಹಿತಿ ಪಡೆದುಕೊಂಡರು.

ಬೆಂಗಳೂರಿನಲ್ಲಿ ದಿನದಿಂದ ದಿನಕ್ಕೆ ವಾಹನಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಪ್ರಮುಖ ರಸ್ತೆಗಳಲ್ಲಿ ಸಂಚಾರ ದಟ್ಟಣೆ ಸಾರ್ವಜನಿಕರಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಉದ್ಯೋಗ, ಶಿಕ್ಷಣ, ವ್ಯಾಪಾರ ಸೇರಿದಂತೆ ವಿವಿಧ ಉದ್ದೇಶಗಳಿಗಾಗಿ ಪ್ರತಿದಿನ ಲಕ್ಷಾಂತರ ಜನರು ಪ್ರಯಾಣಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಮೆಟ್ರೋ ಜಾಲದ ವಿಸ್ತರಣೆ ನಗರದ ಸಾರಿಗೆ ವ್ಯವಸ್ಥೆಗೆ ಮಹತ್ವದ ನೆರವು ನೀಡಲಿದೆ.

ಗುಲಾಬಿ ಮಾರ್ಗದ ಈ ಎತ್ತರಿಸಿದ ವಿಭಾಗದ ಸಂಚಾರ ಆರಂಭದಿಂದ ದಕ್ಷಿಣ ಬೆಂಗಳೂರಿನ ವಿವಿಧ ಪ್ರದೇಶಗಳ ನಡುವಿನ ಸಂಪರ್ಕ ಸುಧಾರಿಸುವ ನಿರೀಕ್ಷೆಯಿದೆ. ವಿಶೇಷವಾಗಿ ಕಾಳೇನ ಅಗ್ರಹಾರ, ಬನ್ನೇರುಘಟ್ಟ ರಸ್ತೆ ಸುತ್ತಮುತ್ತಲಿನ ಪ್ರದೇಶಗಳು ಹಾಗೂ ಪ್ರಮುಖ ವಾಣಿಜ್ಯ ಮತ್ತು ಶೈಕ್ಷಣಿಕ ಕೇಂದ್ರಗಳಿಗೆ ತೆರಳುವ ಪ್ರಯಾಣಿಕರಿಗೆ ಅನುಕೂಲವಾಗಲಿದೆ.

ಮೆಟ್ರೋ ಸಂಪರ್ಕ ವಿಸ್ತರಣೆಯು ರಸ್ತೆ ಮೇಲಿನ ವಾಹನಗಳ ಅವಲಂಬನೆಯನ್ನು ಕಡಿಮೆ ಮಾಡುವುದರ ಜೊತೆಗೆ ಪ್ರಯಾಣದ ಸಮಯ ಮತ್ತು ಇಂಧನ ವೆಚ್ಚವನ್ನು ತಗ್ಗಿಸಲು ಸಹಕಾರಿಯಾಗಲಿದೆ. ಅಲ್ಲದೆ, ಪರಿಸರ ಮಾಲಿನ್ಯ ನಿಯಂತ್ರಣ ಹಾಗೂ ಸುಸ್ಥಿರ ನಗರ ಸಾರಿಗೆ ವ್ಯವಸ್ಥೆ ನಿರ್ಮಾಣಕ್ಕೂ ಪೂರಕವಾಗಲಿದೆ.

ಬೆಂಗಳೂರನ್ನು ಆಧುನಿಕ ಮೂಲಸೌಕರ್ಯ ಹೊಂದಿರುವ, ಸುಗಮ ಸಂಚಾರ ವ್ಯವಸ್ಥೆಯುಳ್ಳ ಹಾಗೂ ಪ್ರಯಾಣಿಕ ಸ್ನೇಹಿ ನಗರವನ್ನಾಗಿ ರೂಪಿಸುವ ಉದ್ದೇಶದಿಂದ ಮೆಟ್ರೋ ಸೇರಿದಂತೆ ಸಾರ್ವಜನಿಕ ಸಾರಿಗೆ ಯೋಜನೆಗಳಿಗೆ ಸರ್ಕಾರ ಆದ್ಯತೆ ನೀಡುತ್ತಿದೆ. ಮುಂದಿನ ದಿನಗಳಲ್ಲಿ ಮೆಟ್ರೋ ಸಂಪರ್ಕ ಜಾಲವನ್ನು ಇನ್ನಷ್ಟು ವಿಸ್ತರಿಸುವ ಮೂಲಕ ನಗರದ ವಿವಿಧ ಭಾಗಗಳನ್ನು ಸಮಗ್ರ ಸಾರಿಗೆ ವ್ಯವಸ್ಥೆಯಡಿ ಸಂಪರ್ಕಿಸುವ ಗುರಿ ಹೊಂದಲಾಗಿದೆ.



ಕಾರ್ಯಕ್ರಮದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆಯವ್ಯಯ ಕುರಿತು ಶಾಸಕ ಬಸವರಾಜ ಶಿವಗಂಗಾ ಚರ್ಚೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ನಗರದ ಶಾಸಕರ ಭವನದ ಐದನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗೆ ಸಂಬಂಧಿಸಿದಂತೆ ಪ್ರಸಕ್ತ ಸಾಲಿನ ಆಯವ್ಯಯದ ಕುರಿತು ಶಾಸಕ ಬಸವರಾಜ ಶಿವಗಂಗಾ ಅವರು ಸಭೆಯಲ್ಲಿ ಚರ್ಚೆ ನಡೆಸಿದರು.



ಇದೇ ಸಂದರ್ಭದಲ್ಲಿ ನಾಗರಬಾವಿಯ ಕ್ಲೌಡ್ ನೈನ್ ಆಸ್ಪತ್ರೆಯಲ್ಲಿ ಕಿವಿಯ ಶಸ್ತ್ರಚಿಕಿತ್ಸೆ ವೇಳೆ ನೀಡಲಾದ ಅರಿವಳಿಕೆಯಿಂದಾಗಿ ಮಾಸ್ಟರ್ ಶಯಾನ್. ಎಸ್. ಪ್ರಜ್ಞೆ ಕಳೆದುಕೊಂಡಿರುವ ಪ್ರಕರಣದ ಬಗ್ಗೆಯೂ ಸಭೆಯಲ್ಲಿ ಗಂಭೀರವಾಗಿ ಚರ್ಚಿಸಲಾಯಿತು. ಘಟನೆಯ ಕುರಿತು ಅಗತ್ಯ ಮಾಹಿತಿ ಪಡೆದು, ಪ್ರಕರಣಕ್ಕೆ ಸಂಬಂಧಿಸಿದಂತೆ ಕೈಗೊಳ್ಳಬೇಕಾದ ಮುಂದಿನ ಕ್ರಮಗಳ ಬಗ್ಗೆ ಸದಸ್ಯರು ಸಮಾಲೋಚನೆ ನಡೆಸಿದರು.

ಮಹಿಳೆಯರು, ಮಕ್ಕಳು, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಕಲ್ಯಾಣಕ್ಕೆ ಸಂಬಂಧಿಸಿದ ಯೋಜನೆಗಳು ಮತ್ತು ಇಲಾಖೆಯ ಕಾರ್ಯಚಟುವಟಿಕೆಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಸದಸ್ಯರಾದ ಬಾಬಾಸಾಹೇಬ್ ಪಾಟೀಲ್, ಪಾವಗಡ ವೆಂಕಟೇಶ್, ಈ. ಅನ್ನಪೂರ್ಣ, ಎಚ್. ಕೆ. ಸುರೇಶ್ (ಹುಲ್ಲಳ್ಳಿ ಸುರೇಶ್), ಎ.ಬಿ. ಗಾಯಿತ್ರಿ, ಶಾಂತಗೌಡ ಹಾಗೂ ಡಾ. ಧನಂಜಯ ಸರ್ಜಿ ಉಪಸ್ಥಿತರಿದ್ದರು.

ಕರ್ನಾಟಕದ ಅಭಿವೃದ್ಧಿಗೆ 15,600 ಕೋಟಿ ಮೊತ್ತದ ಯೋಜನೆಗಳಿಗೆ ಚಾಲನೆ: ಪ್ರಧಾನಿ ಮೋದಿ, ಸಿಎಂ ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ನ, 13– ಕರ್ನಾಟಕದ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡುವ ನಿಟ್ಟಿನಲ್ಲಿ 15,600 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಾಯಿತು.

ನಗರದ ಐಐಎಂ ಬೆಂಗಳೂರು ಆಡಿಟೋರಿಯಂನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾಗವಹಿಸಿ, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಪೂರ್ಣಗೊಂಡ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಲಾಯಿತು.



ರಾಜ್ಯದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿರುವ ಈ ಯೋಜನೆಗಳು ಮೂಲಸೌಕರ್ಯ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ತರಲಿವೆ. ಜನಸಾಮಾನ್ಯರ ಜೀವನಮಟ್ಟ ಸುಧಾರಿಸುವುದರ ಜೊತೆಗೆ, ರಾಜ್ಯದ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ಉತ್ತೇಜನ ನೀಡುವ ನಿರೀಕ್ಷೆಯಿದೆ. ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಕೈಗೊಳ್ಳಲಾಗಿರುವ ಈ ಯೋಜನೆಗಳು ಸುಸ್ಥಿರ ಅಭಿವೃದ್ಧಿಗೆ ಭದ್ರ ಬುನಾದಿಯಾಗಲಿವೆ.

ಕರ್ನಾಟಕದ ಅಭಿವೃದ್ಧಿಯ ಪಯಣದಲ್ಲಿ ಮೂಲಸೌಕರ್ಯ ವಿಸ್ತರಣೆ, ಸಾರ್ವಜನಿಕ ಸೌಲಭ್ಯಗಳ ಸುಧಾರಣೆ ಹಾಗೂ ಹೊಸ ಅವಕಾಶಗಳ ಸೃಷ್ಟಿಗೆ ಈ ಯೋಜನೆಗಳು ಮಹತ್ವದ ಕೊಡುಗೆ ನೀಡಲಿವೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯಪಾಲರಾದ ಡಾ. ಸುಧಾ ಯಾದವ್, ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಮಿಯಾವಾಕಿ ಮಾದರಿಯ ಭಾರತ ವನ ಯೋಜನೆಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

"ಮುಂಜಾನೆಯ ಮೆರಗು"

ಮೈಸೂರು ನ, 13– ಹಸಿರು ಪರಿಸರ ನಿರ್ಮಾಣ ಹಾಗೂ ಪ್ರಕೃತಿ ಸಮತೋಲನ ಕಾಪಾಡುವ ಉದ್ದೇಶದಿಂದ ಮೈಸೂರಿನ ಲಲಿತಾದ್ರಿಪುರದ ಬಳಿ ಕ್ಯಾಚ್ ಫೌಂಡೇಶನ್, ಎಸ್‌ಬಿಐ ಮತ್ತು ಎಸ್‌ಬಿಐ ಫೌಂಡೇಶನ್‌ಗಳ ಸಿಎಸ್‌ಆರ್ ಅನುದಾನದಡಿ ಬೃಹತ್ ಗಿಡ ನೆಡುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾಗವಹಿಸಿದ್ದರು.

ಜಪಾನ್‌ನ ಪ್ರಸಿದ್ಧ ಮಿಯಾವಾಕಿ ಮಾದರಿಯಲ್ಲಿ ರೂಪಿಸಲಾಗುತ್ತಿರುವ ಭಾರತ ವನ ಯೋಜನೆಯಡಿ ಒಂದೇ ದಿನ 40 ಸಾವಿರ ಗಿಡಗಳನ್ನು ನೆಡಲಾಗಿದ್ದು, ಸ್ಥಳೀಯ ತಳಿಯ ಸಸಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಈ ಪ್ರದೇಶ ಸುಂದರವಾದ ನಗರ ಕಾಡಾಗಿ ರೂಪುಗೊಳ್ಳುವ ನಿರೀಕ್ಷೆಯಿದೆ. ಇದರಿಂದ ಪರಿಸರ ಸಮತೋಲನ ಕಾಪಾಡುವುದರ ಜೊತೆಗೆ ಹಕ್ಕಿ–ಪಕ್ಷಿಗಳು ಹಾಗೂ ವಿವಿಧ ಪ್ರಾಣಿ ಸಂಕುಲಗಳಿಗೆ ನೈಸರ್ಗಿಕ ಆವಾಸಸ್ಥಾನ ನಿರ್ಮಾಣವಾಗಲಿದೆ.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಹಾಗೂ ತಾಯಂದಿರ ಹೆಸರಿನಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಿದರು.

ಹಸಿರು ಪರಿಸರ ನಿರ್ಮಾಣವು ಮುಂದಿನ ಪೀಳಿಗೆಗೆ ನಾವು ನೀಡಬಹುದಾದ ಅಮೂಲ್ಯ ಕೊಡುಗೆಯಾಗಿದೆ. ಇಂತಹ ಸಾಮೂಹಿಕ ಅಭಿಯಾನಗಳ ಮೂಲಕ ಮೈಸೂರನ್ನು ಇನ್ನಷ್ಟು ಹಸಿರು ಮತ್ತು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸುವ ಸಂಕಲ್ಪ ಮಾಡಲಾಗಿದೆ.



ಈ ಸಂದರ್ಭದಲ್ಲಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಶ್ರೀವತ್ಸ, ಪರಿಸರವಾದಿ ಡಾ. ರಾಧಾಕೃಷ್ಣ ನಾಯರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಎಸ್‌ಬಿಐ ಫೌಂಡೇಶನ್‌ನ ಪ್ರಧಾನ ಮುಖ್ಯ ವ್ಯವಸ್ಥಾಪಕ ದೀಪಕ್ ಕೌಶಿಕ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಮಾಡುವ ಕಾಯಕವನ್ನು ನಿಷ್ಠೆ ಮತ್ತು ಗೌರವದಿಂದ ನಿರ್ವಹಿಸಬೇಕು: ಕೆ.ವಿ. ಪ್ರಭಾಕರ್

"ಮುಂಜಾನೆಯ ಮೆರಗು"

ಬೆಳಗಾವಿ ನ, 13– ಯಾವುದೇ ವೃತ್ತಿಯೂ ಕೀಳಲ್ಲ, ಮೇಲಲ್ಲ. ಮಾಡುವ ಕಾಯಕವನ್ನು ನಿಷ್ಠೆ ಮತ್ತು ಗೌರವದಿಂದ ನಿರ್ವಹಿಸಬೇಕು ಎಂದು ನಿಕಟಪೂರ್ವ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ತಿಳಿಸಿದರು.



ನಗರದ ಅಶೋಕನಗರದ ಧರ್ಮನಾಥ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ (ರಿ.), ನ್ಯೂಸ್‌ಪೇಪರ್ ಡಿಸ್ಟ್ರಿಬ್ಯೂಟರ್ಸ್ ಚಾರಿಟಬಲ್ ಟ್ರಸ್ಟ್ (ರಿ.) ಹಾಗೂ ಬೆಳಗಾವಿ ದಿನಪತ್ರಿಕೆ ವಿತರಕರ ಸಂಘದ ಆಶ್ರಯದಲ್ಲಿ ಆಯೋಜಿಸಿದ್ದ ಪತ್ರಿಕಾ ವಿತರಕರ 6ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕೋದ್ಯಮದಲ್ಲಿ ಸಂಪಾದಕರು ಮತ್ತು ವರದಿಗಾರರನ್ನು ಮಾತ್ರ ಹೆಚ್ಚಾಗಿ ನೆನಪಿಸಿಕೊಳ್ಳಲಾಗುತ್ತದೆ. ಆದರೆ ಪತ್ರಿಕೆಗಳನ್ನು ಬೆಳಗಿನ ಜಾವ ಮನೆಮನೆಗೆ ತಲುಪಿಸುವ ವಿತರಕರು ಪತ್ರಿಕೋದ್ಯಮದ ಬೆನ್ನೆಲುಬಾಗಿದ್ದಾರೆ. ಜನರು ಬೆಳಗ್ಗೆ ಎದ್ದ ತಕ್ಷಣ ಪತ್ರಿಕೆಗಾಗಿ ಕಾಯುತ್ತಾರೆ. ಅಂತಹ ಮಹತ್ವದ ಜವಾಬ್ದಾರಿಯನ್ನು ನಿರ್ವಹಿಸುವ ವಿತರಕರು ತಮ್ಮ ವೃತ್ತಿಯನ್ನು ಹೆಮ್ಮೆಯಿಂದ ಸ್ವೀಕರಿಸಬೇಕು. ಪತ್ರಿಕಾ ವಿತರಕರಿಲ್ಲದೆ ಪತ್ರಿಕಾ ರಂಗವನ್ನು ಕಲ್ಪಿಸಿಕೊಳ್ಳಲು ಸಾಧ್ಯವಿಲ್ಲ. ಪತ್ರಿಕಾ ಸಂಸ್ಥೆಗಳು ವಿತರಕರನ್ನು ತಮ್ಮ ಸಂಸ್ಥೆಯ ಅವಿಭಾಜ್ಯ ಅಂಗವೆಂದು ಪರಿಗಣಿಸಿದಾಗ ಅವರಿಗೂ ಸೂಕ್ತ ಗೌರವ ಮತ್ತು ಸೌಲಭ್ಯ ದೊರೆಯಲಿದೆ ಎಂದರು.

ಸಮಾಜಕ್ಕೆ ಸಲ್ಲಿಸುವ ಸೇವೆಯನ್ನು ಹುದ್ದೆ ಅಥವಾ ಸ್ಥಾನಮಾನದಿಂದ ಅಳೆಯಬಾರದು. ಪತ್ರಿಕಾ ವಿತರಕರನ್ನು ಸಮಾಜದ ಹೀರೋಗಳಂತೆ ಗುರುತಿಸಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಅವರ ಭವಿಷ್ಯ ರೂಪಿಸಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಪತ್ರಿಕಾ ವಿತರಕರು ಕಾರ್ಮಿಕ ಇಲಾಖೆಯ ಮೂಲಕ ಇ–ಶ್ರಮ್ ಕಾರ್ಡ್ ಮಾಡಿಸಿಕೊಂಡು ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆದುಕೊಳ್ಳಬೇಕು. ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಪತ್ರಕರ್ತರ ಕುಟುಂಬಗಳಿಗೆ ಐದು ಲಕ್ಷ ರೂ. ನೆರವು ನೀಡಲಾಗಿದೆ. ಸಂಘಟನೆ ಬಲಿಷ್ಠವಾಗಿದ್ದರೆ ಮಾತ್ರ ಹಕ್ಕುಗಳಿಗಾಗಿ ಹೋರಾಟ ನಡೆಸಲು ಸಾಧ್ಯ. ವಿತರಕರು ಸಂಘಟಿತರಾಗಿ ತಮ್ಮ ಬೇಡಿಕೆಗಳನ್ನು ಸರ್ಕಾರದ ಮುಂದಿಡಬೇಕು. ಪತ್ರಿಕಾ ವಿತರಕರಿಗಾಗಿ ಪ್ರತ್ಯೇಕ ನಿಗಮ ಅಥವಾ ಅಕಾಡೆಮಿ ಸ್ಥಾಪನೆಯಾಗುವ ನಿಟ್ಟಿನಲ್ಲಿ ಒತ್ತಾಯಿಸಬೇಕು ಎಂದು ತಿಳಿಸಿದರು.

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

"ಮುಂಜಾನೆಯ ಮೆರಗು"

ಮೈಸೂರು ನ, 13– ಹಸಿರು ಪರಿಸರ ನಿರ್ಮಾಣ ಹಾಗೂ ಪ್ರಕೃತಿ ಸಮತೋಲನ ಕಾಪಾಡುವ ಉದ್ದೇಶದಿಂದ ಮೈಸೂರಿನ ಲಲಿತಾದ್ರಿಪುರದ ಬಳಿ ಕ್ಯಾಚ್ ಫೌಂಡೇಶನ್, ಎಸ್‌ಬಿಐ ಮತ್ತು ಎಸ್‌ಬಿಐ ಫೌಂಡೇಶನ್‌ಗಳ ಸಿಎಸ್‌ಆರ್ ಅನುದಾನದಡಿ ಬೃಹತ್ ಗಿಡ ನೆಡುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾಗವಹಿಸಿದ್ದರು.

ಜಪಾನ್‌ನ ಪ್ರಸಿದ್ಧ ಮಿಯಾವಾಕಿ ಮಾದರಿಯಲ್ಲಿ ರೂಪಿಸಲಾಗುತ್ತಿರುವ ಭಾರತ ವನ ಯೋಜನೆಯಡಿ ಒಂದೇ ದಿನ 40 ಸಾವಿರ ಗಿಡಗಳನ್ನು ನೆಡಲಾಗಿದ್ದು, ಸ್ಥಳೀಯ ತಳಿಯ ಸಸಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಈ ಪ್ರದೇಶ ಸುಂದರವಾದ ನಗರ ಕಾಡಾಗಿ ರೂಪುಗೊಳ್ಳುವ ನಿರೀಕ್ಷೆಯಿದೆ. ಇದರಿಂದ ಪರಿಸರ ಸಮತೋಲನ ಕಾಪಾಡುವುದರ ಜೊತೆಗೆ ಹಕ್ಕಿ–ಪಕ್ಷಿಗಳು ಹಾಗೂ ವಿವಿಧ ಪ್ರಾಣಿ ಸಂಕುಲಗಳಿಗೆ ನೈಸರ್ಗಿಕ ಆವಾಸಸ್ಥಾನ ನಿರ್ಮಾಣವಾಗಲಿದೆ.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಹಾಗೂ ತಾಯಂದಿರ ಹೆಸರಿನಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಿದರು.

ಹಸಿರು ಪರಿಸರ ನಿರ್ಮಾಣವು ಮುಂದಿನ ಪೀಳಿಗೆಗೆ ನಾವು ನೀಡಬಹುದಾದ ಅಮೂಲ್ಯ ಕೊಡುಗೆಯಾಗಿದೆ. ಇಂತಹ ಸಾಮೂಹಿಕ ಅಭಿಯಾನಗಳ ಮೂಲಕ ಮೈಸೂರನ್ನು ಇನ್ನಷ್ಟು ಹಸಿರು ಮತ್ತು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸುವ ಸಂಕಲ್ಪ ಮಾಡಲಾಗಿದೆ.

ಈ ಸಂದರ್ಭದಲ್ಲಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಶ್ರೀವತ್ಸ, ಪರಿಸರವಾದಿ ಡಾ. ರಾಧಾಕೃಷ್ಣ ನಾಯರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಎಸ್‌ಬಿಐ ಫೌಂಡೇಶನ್‌ನ ಪ್ರಧಾನ ಮುಖ್ಯ ವ್ಯವಸ್ಥಾಪಕ ದೀಪಕ್ ಕೌಶಿಕ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಮೀನುಗಾರಿಕೆ ಇಲಾಖೆಯ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನೆ

**"

ಬಿಸಿಯೂಟ ಯೋಜನೆ ಎನ್‌ಜಿಒಗಳಿಗೆ ವಹಿಸುವ ಪ್ರಸ್ತಾಪ ಖಂಡಿಸಿ ಅಡುಗೆ ಬಂದ್ ಮಾಡಿ ಪ್ರತಿಭಟನೆ

ರಾಜ್ಯ ಸರ್ಕಾರದ ನಿರ್ಧಾರಕ್ಕೆ ವಿರೋಧ; 522 ಬಿಸಿಯೂಟ ಕಾರ್ಯಕರ್ತೆಯರ ಆಕ್ರೋಶ

"ಮುಂಜಾನೆಯ ಮೆರಗು"

ಜಗಳೂರು, ನ.13– ಅಕ್ಷರದಾಸೋಹ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಎನ್‌ಜಿಒ ಹಾಗೂ ಖಾಸಗಿ ಸಂಘ–ಸಂಸ್ಥೆಗಳಿಗೆ ವಹಿಸುವ ಸರ್ಕಾರದ ಪ್ರಸ್ತಾಪವನ್ನು ಖಂಡಿಸಿ, ಬಿಸಿಯೂಟ ತಯಾರಕ ಮಹಿಳೆಯರನ್ನು ಕೆಲಸದಿಂದ ಕೈಬಿಡುವ ಹುನ್ನಾರ ನಡೆ–ಯುತ್ತಿದೆ ಎಂದು ಆರೋಪಿಸಿ ಎಐ–ಟಿಯುಸಿ ಸಂಯೋಜಿತ ಅಕ್ಷರದಾಸೋಹ ಬಿಸಿಯೂಟ ಕಾರ್ಯಕರ್ತೆಯರು ಗುರುವಾರ ತಾಲ್ಲೂಕಿನಾದ್ಯಂತ ಶಾಲೆಗಳಲ್ಲಿ ಅಡುಗೆ ಕಾರ್ಯ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಿದರು.

ರಾಜ್ಯಮಟ್ಟದ ಪ್ರತಿಭಟನೆಗೆ ಬೆಂಬಲ ಸೂಚಿಸಿದ ಕಾರ್ಯಕರ್ತೆಯರು, ಪಟ್ಟಣದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಜಮಾಯಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಶೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ, ಬಿಸಿಯೂಟ ಯೋಜನೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸುವ ನಿರ್ಧಾರವನ್ನು ಕೂಡಲೇ ಕೈಬಿಡುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಐಟಿಯುಸಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಮಾದಿಹಳ್ಳಿ ಮಂಜುನಾಥ್ ಮಾತನಾಡಿ, ಕಳೆದ 25 ವರ್ಷಗಳಿಂದ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆಯಡಿ ಸಾವಿರಾರು ಮಹಿಳೆಯರು ಅಡುಗೆ ಕೆಲಸ ನಿರ್ವಹಿಸುತ್ತಿದ್ದಾರೆ. ಜಗಳೂರು ತಾಲ್ಲೂಕಿನಾದ್ಯಂತ ಸುಮಾರು 522 ಮಹಿಳೆಯರು ಬಿಸಿಯೂಟ ತಯಾರಕರಾಗಿ ಸೇವೆ ಸಲ್ಲಿಸುತ್ತಿದ್ದು, ಇವರ ಉದ್ಯೋಗ–ಕ್ಕೆ ಇದೀಗ ಅಭದ್ರತೆ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಬಿಸಿಯೂಟ ತಯಾರಿಕೆ–ಯ ಜವಾಬ್ದಾರಿಯನ್ನು ಎನ್‌ಜಿಒ ಹಾಗೂ ಖಾಸಗಿ ಸಂಘ–ಸಂಸ್ಥೆಗಳಿಗೆ ವಹಿಸಿ, ಕ್ಲಸ್ಟರ್ ಮಟ್ಟದಲ್ಲಿ ಕೇಂದ್ರೀಕೃತ ಅಡುಗೆ ಕೇಂದ್ರಗಳನ್ನು ಸ್ಥಾಪಿಸಿ ಆಹಾರ ತಯಾರಿಸಿ ಶಾಲೆಗಳಿಗೆ ವಿತರಿಸುವ ಪ್ರಸ್ತಾಪವನ್ನು ಸರ್ಕಾರ ಮುಂದಿಟ್ಟಿರುವುದು ಖಂಡನೀಯ. ಇದರಿಂದ ಹಲವು ವರ್ಷಗಳಿಂದ ಅಲ್ಪ ಗೌರವಧನಕ್ಕೆ ದುಡಿಯುತ್ತಿರುವ ಮಹಿಳೆಯರು ಉದ್ಯೋಗ ಕಳೆದುಕೊಂಡು ಬೀದಿಪಾಲಾಗುವ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ದೂರಿದರು.



ಮಧ್ಯಾಹ್ನದ ಉಪಾಹಾರ ಯೋಜನೆಯ ಕೈಪಿಡಿಯಲ್ಲಿ ಶಾಲೆಯ ಮುಖ್ಯ ಅಡುಗೆಯವರು ಅಡುಗೆ ಕೆಲಸದ ಜವಾಬ್ದಾರಿಗಳನ್ನು ನಿರ್ವಹಿಸುವ ಕುರಿತು ಸ್ಪಷ್ಟ ಉಲ್ಲೇಖವಿದೆ. ಆದರೆ, ಶಿಕ್ಷಕರ ಕೆಲಸದ ಹೊರೆ ಕಡಿಮೆ ಮಾಡುವ ನೆಪದಲ್ಲಿ ಬಿಸಿಯೂಟ ತಯಾರಿಕೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸುವಂತೆ ಶಿಕ್ಷಕರ ಸಂಘ ರಾಜ್ಯ ನಿರ್ದೇಶಕರಿಗೆ ಮನವಿ ಸಲ್ಲಿಸಿರುವುದು ಎಷ್ಟರಮಟ್ಟಿಗೆ ಸಮಂಜಸ ಎಂದು ಪ್ರಶ್ನಿಸಿದರು.

ಬಿಸಿಯೂಟ ತಯಾರಿಕೆಯಲ್ಲಿ ಶಿಕ್ಷಕರು ನೇರವಾಗಿ ಭಾಗವಹಿಸಬೇಕೆಂಬ ನಿಯಮ ಕೈಪಿಡಿಯಲ್ಲಿ ಇಲ್ಲದಿದ್ದರೂ, ಶಿಕ್ಷಕರ ಸಂಘದ ಮನವಿಯನ್ನೇ ಆಧಾರವಾಗಿಟ್ಟುಕೊಂಡು ರಾಜ್ಯ ನಿರ್ದೇಶಕರು ಏಕಪಕ್ಷೀಯವಾಗಿ ಕೇಂದ್ರೀಕೃತ ಅಡುಗೆ ವ್ಯವಸ್ಥೆ ಜಾರಿಗೆ ಮುಂದಾಗಿರುವುದು ಸರಿಯಲ್ಲ. ರಾಜ್ಯಾದ್ಯಂತ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸುಮಾರು 1.13 ಲಕ್ಷ ಬಿಸಿಯೂಟ ತಯಾರಕ ಮಹಿಳೆಯರ ಉದ್ಯೋಗ ಮತ್ತು ಜೀವನೋಪಾಯಕ್ಕೆ ಧಕ್ಕೆ ತರುವ ಇಂತಹ ನಿರ್ಧಾರವನ್ನು ಸರ್ಕಾರ ತಕ್ಷಣವೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಮಹಿಳಾ ಕಾರ್ಯಕರ್ತೆಯರ ಬದುಕು ಮತ್ತು ಮಕ್ಕಳಿಗೆ ಸ್ಥಳೀಯವಾಗಿ ತಯಾರಿಸಿದ ಬಿಸಿಯೂಟ ಒದಗಿಸುವ ವ್ಯವಸ್ಥೆಯನ್ನು ಉಳಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಬಿಸಿಯೂಟ ಯೋಜನೆಯನ್ನು ಖಾಸಗಿ ಸಂಸ್ಥೆಗಳ ಪಾಲಾಗಲು ಬಿಡುವುದಿಲ್ಲ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಎಐಟಿಯುಸಿ ತಾಲ್ಲೂಕು ಅಧ್ಯಕ್ಷ ಗೊಲ್ಲರಹಟ್ಟಿ ತಿಪ್ಪೇಸ್ವಾಮಿ, ಅಕ್ಷರದಾಸೋಹ ಬಿಸಿಯೂಟ ಸಂಘಟನೆಯ ಮುಖಂಡರಾದ ಮಡ್ರಹಳ್ಳಿ ರೇಣುಕಮ್ಮ, ಕಾನನಕಟ್ಟೆ ಚೌಡಮ್ಮ, ಲಕ್ಷ್ಮಿ, ಪಲ್ಲಾಗಟ್ಟೆ ಪಾರ್ವತಿ, ಅಂಜುಮ್ ಬಾನು, ಅಂಬಿಕಾ, ಕರಿಬಸಮ್ಮ, ಗೌರಮ್ಮ, ಸಾಕಮ್ಮ, ತಿಪ್ಪೀರಮ್ಮ ಸೇರಿದಂತೆ ಹಲವು ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ಸ್ಪರ್ಧಾತ್ಮಕ ಮನೋಭಾವ ಬೆಳೆಸುವಲ್ಲಿ ಪ್ರತಿಭಾ ಕಾರಂಜಿ ಸಹಕಾರಿ: ಸುವರ್ಣಮ್ಮ

"ಮುಂಜಾನೆಯ ಮೆರಗು"

ಜಗಳೂರು, ನ.13– ಮಕ್ಕಳಲ್ಲಿರುವ ಸುಪ್ತ ಪ್ರತಿಭೆಗಳನ್ನು ಗುರುತಿಸಿ, ಅವುಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಅವರಲ್ಲಿ ಆತ್ಮವಿಶ್ವಾಸ, ಸೃಜನಶೀಲತೆ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ದೈಹಿಕ ಶಿಕ್ಷಣಾಧಿಕಾರಿ ಸುವರ್ಣಮ್ಮ ಹೇಳಿದರು.

ತಾಲೂಕಿನ ರಸ್ತೆಮಾಕುಂಟೆ ಸರ್ಕಾರಿ ಶಾಲೆಯ ಆವರಣದಲ್ಲಿ ಆಯೋಜಿಸಿದ್ದ ಬಿದರಕೆರೆ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿಯೊಂದು ಮಗುವಿನಲ್ಲಿಯೂ ಒಂದಲ್ಲೊಂದು ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪೋಷಕರ ಮೇಲಿದೆ. ಶಿಕ್ಷಣದ ಜತೆಗೆ ಕಲೆ, ಸಾಹಿತ್ಯ, ಸಂಗೀತ, ನೃತ್ಯ, ಅಭಿನಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ



ಮಕ್ಕಳು ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿವೆ ಎಂದರು.

ಸ್ಪರ್ಧೆಗಳಲ್ಲಿ ಭಾಗವಹಿಸುವುದೇ ಮಕ್ಕಳಿಗೆ ಮುಖ್ಯವಾಗಬೇಕು. ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಗ್ರಾಮೀಣ ಭಾಗದ ಮಕ್ಕಳಲ್ಲಿಯೂ ಅಪಾರ ಪ್ರತಿಭೆ ಅಡಗಿದ್ದು, ಅವರಿಗೆ ಸೂಕ್ತ ಅವಕಾಶ, ಪ್ರೋತ್ಸಾಹ ಹಾಗೂ ಮಾರ್ಗದರ್ಶನ ದೊರೆತರೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿಯೂ ಸಾಧನೆ ಮಾಡಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿದರಕೆರೆ ಕ್ಲಸ್ಟರ್ ವ್ಯಾಪ್ತಿಯ 17 ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ದೇಶಭಕ್ತಿಗೀತೆ, ಭಾವಗೀತೆ, ಛದ್ಮವೇಷ, ಜಾನಪದ ನೃತ್ಯ, ಭಾಷಣ, ಆಶುಭಾಷಣ, ಅಭಿನಯಗೀತೆ, ಚಿತ್ರಕಲೆ, ಭಾಷಾ ವಿಷಯಗಳ ಕಂಠಪಾಠ, ಕಥೆ ಹೇಳುವುದು, ರಸಪ್ರಶ್ನೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಇಸಿಒ ಓಬನಾಯ್ಕ, ಬಿಆರ್‌ಸಿ ಲತಾ, ಸಿಆರ್‌ಪಿ ಗಂಗಾಧರಪ್ಪ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಶ್ರೀಧರ್, ನೌಕರರ ಸಂಘದ ನಿರ್ದೇಶಕ ಈರಪ್ಪ, ಡಯಟ್ ಉಪನ್ಯಾಸಕ ಶ್ರೀನಿವಾಸ್, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಮುಖಂಡರು, ಶಿಕ್ಷಕರು ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ: ಜಿಲ್ಲಾ ಮಟ್ಟಕ್ಕೆ ಅಂಬೇಡ್ಕರ್ ಶಾಲೆಯ ವಿದ್ಯಾರ್ಥಿನಿಯರ ಆಯ್ಕೆ

"ಮುಂಜಾನೆಯ ಮೆರಗು"

ಜಗಳೂರು ನ, 13– ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಪ್ರೌಢಶಾಲೆಯ ವಿದ್ಯಾರ್ಥಿನಿಯರು ತಾಲೂಕು ಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.



ಪಟ್ಟಣದ ಇಮಾಂ ಶಾಲೆಯಲ್ಲಿ ಶುಕ್ರವಾರ ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ವಿಜ್ಞಾನ ನಾಟಕ, ವಿಜ್ಞಾನ ವಿಚಾರಗೋಷ್ಠಿ ಹಾಗೂ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಅಂಬೇಡ್ಕರ್ ಪ್ರೌಢಶಾಲೆಯ ವಿದ್ಯಾರ್ಥಿನಿಯರಾದ ಭವಾನಿ.ಸಿ. ಹಾಗೂ ಪ್ರಿಯಾಮಣಿ.ಎನ್. ಅವರು ಉತ್ತಮ ವಿಜ್ಞಾನ ಮಾದರಿಯನ್ನು ಸಿದ್ಧಪಡಿಸಿ, ಅದರ ಕಾರ್ಯವಿಧಾನ ಮತ್ತು ಮಹತ್ವದ ಕುರಿತು ಪರಿಣಾಮಕಾರಿಯಾಗಿ ವಿವರಣೆ ನೀಡುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ವಿದ್ಯಾರ್ಥಿನಿಯರ ಈ ಸಾಧನೆಯಿಂದ ಶಾಲೆಗೆ ಹಾಗೂ ಶಿಕ್ಷಕರಿಗೆ ಕೀರ್ತಿ ತಂದಿದ್ದು, ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿರುವುದು ಶಾಲೆಯ ಹೆಮ್ಮೆಯ ಸಂಗತಿಯಾಗಿದೆ.

ವಿದ್ಯಾರ್ಥಿನಿಯರ ಸಾಧನೆಗೆ ಶಾಲೆಯ ಮುಖ್ಯಶಿಕ್ಷಕರು, ಶಿಕ್ಷಕ ವೃಂದ, ಸಿಬ್ಬಂದಿ ವರ್ಗ ಹಾಗೂ ಆಡಳಿತ ಮಂಡಳಿಯವರು ಅಭಿನಂದನೆ ಸಲ್ಲಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿಯೂ ಉತ್ತಮ ಸಾಧನೆ ಮಾಡುವ ಮೂಲಕ ಶಾಲೆಗೆ ಮತ್ತಷ್ಟು ಗೌರವ ತರಲಿ ಎಂದು ಶುಭ ಹಾರೈಸಿದ್ದಾರೆ.

ತಾಲೂಕು ಕಚೇರಿಯಲ್ಲಿ ಕುಡಿಯುವ ನೀರಿಗೂ ತತ್ವಾರ!

ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ಹಲವು ದಿನಗಳು ಕಳೆದರೂ ದುರಸ್ತಿಗೆ ಮುಂದಾಗದ ಅಧಿಕಾರಿಗಳು

"ಮುಂಜಾನೆಯ ಮೆರಗು"

ಜಗಳೂರು ನ, 13– ಸಾರ್ವಜನಿಕರ ಅನುಕೂಲಕ್ಕಾಗಿ ತಾಲೂಕು ಕೇಂದ್ರ ಸ್ಥಾನದಲ್ಲಿರುವ ತಾಲೂಕು ಕಚೇರಿ ಆವರಣದಲ್ಲಿ ಅಳವಡಿಸಲಾಗಿದ್ದ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟುಹೋಗಿದ್ದು, ಕೆಲಸ ಕಾರ್ಯಗಳಿಗಾಗಿ ಕಚೇರಿಗೆ ಆಗಮಿಸುವ ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಹಿಂದೆ ತಾಲೂಕು ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ತಹಸೀಲ್ದಾರ್ ಸೈಯ್ಯದ್ ಕಲೀಮುಲ್ಲಾ ಅವರು ಸಾರ್ವಜನಿಕರ ಹಿತದೃಷ್ಟಿಯಿಂದ ಕಚೇರಿ ಆವರಣದಲ್ಲಿ ಮಿನಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಅಳವಡಿಸುವ ಮೂಲಕ ಜನರಿಗೆ ಅನುಕೂಲ ಕಲ್ಪಿಸಿದ್ದರು. ಇದರಿಂದಾಗಿ ದೂರದೂರುಗಳಿಂದ ತಾಲೂಕು ಕಚೇರಿಗೆ ಆಗಮಿಸುತ್ತಿದ್ದ ರೈತರು, ಮಹಿಳೆಯರು, ವೃದ್ಧರು ಸೇರಿದಂತೆ ಸಾರ್ವಜನಿಕರು ಉಚಿತವಾಗಿ ಶುದ್ಧ ಕುಡಿಯುವ ನೀರನ್ನು ಪಡೆದುಕೊಳ್ಳುತ್ತಿದ್ದರು.

ಆದರೆ ಇತ್ತೀಚಿನ ದಿನಗಳಲ್ಲಿ ಈ ಮಿನಿ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟುಹೋಗಿದ್ದು, ನಿರ್ವಹಣೆ ಮತ್ತು ದುರಸ್ತಿಯಿಲ್ಲದೆ ಸ್ಥಗಿ–ತಗೊಂಡಿದೆ. ಇದರಿಂದಾಗಿ ದಿನನಿತ್ಯ ನೂರಾರು ಸಂಖ್ಯೆಯಲ್ಲಿ ತಾಲೂಕು ಕಚೇರಿಗೆ ಆಗಮಿಸುವ ಸಾರ್ವಜನಿಕರಿಗೆ ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ.



ವಿಶೇಷವಾಗಿ ದೂರದ ಗ್ರಾಮಗಳಿಂದ ಬೆಳಗ್ಗೆಯೇ ತಮ್ಮ ಜಮೀನುಗಳಿಗೆ ಸಂಬಂಧಿಸಿದ ಪಹಣಿ, ಆಧಾರ್, ಜಾತಿ ಮತ್ತು ಆದಾಯ ಪ್ರಮಾಣಪತ್ರ ಸೇರಿದಂತೆ ವಿವಿಧ ಸರ್ಕಾರಿ ಕೆಲಸಗಳಿಗಾಗಿ ಬರುವ ಬಡ ರೈತರು ಹಾಗೂ ಕೂಲಿ ಕಾರ್ಮಿಕರು ಕುಡಿಯುವ ನೀರಿಗಾಗಿ ಹಣ ನೀಡಿ ಬಾಟಲಿ ನೀರು ಖರೀದಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಕೆಲವರು ಹಣ ಕೊಟ್ಟು ನೀರು ಖರೀದಿಸಿದರೆ, ಇನ್ನೂ ಕೆಲವರು ಕುಡಿಯುವ ನೀರಿನ ವ್ಯವಸ್ಥೆಯಿಲ್ಲದೆ ಬಾಯಾರಿಕೆಯಿಂದಲೇ ತಮ್ಮ ಕೆಲಸ ಮುಗಿಸಿಕೊಂಡು ವಾಪಸ್ ತೆರಳುವ ಪರಿಸ್ಥಿತಿ ನಿರ್ಮಾಣವಾಗಿದೆ.



ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸಬೇಕಾದ ತಾಲೂಕು ಕಚೇರಿಯಲ್ಲಿಯೇ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ವಿಪರ್ಯಾಸದ ಸಂಗತಿಯಾಗಿದೆ. ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಅಧಿಕಾರಿಗಳು, ಸಾರ್ವಜನಿಕರಿಗೆ ಅತ್ಯಗತ್ಯವಾಗಿರುವ ಕುಡಿಯುವ ನೀರಿನ ಘಟಕದ ದುರಸ್ತಿಗೆ ಏಕೆ ಮುಂದಾಗುತ್ತಿಲ್ಲ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಬೇಸಿಗೆಯ ದಿನಗಳಲ್ಲಿ ಮಾತ್ರವಲ್ಲದೆ ವರ್ಷಪೂರ್ತಿ ಕಚೇರಿಗೆ ಬರುವ ಜನರಿಗೆ ಕುಡಿಯುವ ನೀರು ಅತ್ಯಗತ್ಯವಾಗಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕೆಟ್ಟುಹೋಗಿರುವ ಶುದ್ಧ ಕುಡಿಯುವ ನೀರಿನ ಘಟಕವನ್ನು ಪರಿಶೀಲಿಸಿ ದುರಸ್ತಿಗೊಳಿಸುವುದರ ಜತೆಗೆ ನಿರಂತರ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ಉಚಿತವಾಗಿ ಶುದ್ಧ ಕುಡಿಯುವ ನೀರು ಲಭ್ಯವಾಗುವಂತೆ ವ್ಯವಸ್ಥೆ ಕಲ್ಪಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಸೊಳ್ಳೆಗಳ ನಿಯಂತ್ರಣಕ್ಕೆ ಪಟ್ಟಣ ಪಂಚಾಯಿತಿ ಫಾಗಿಂಗ್ ಕಾರ್ಯಾಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 13– ಪಟ್ಟಣದಲ್ಲಿ ಸೊಳ್ಳೆಗಳ ಹಾವಳಿ ನಿಯಂತ್ರಿಸುವ ಹಾಗೂ ಸಾಂಕ್ರಾಮಿಕ ರೋಗಗಳು ಹರಡುವುದನ್ನು ತಡೆಗಟ್ಟುವ ಉದ್ದೇಶದಿಂದ ಪಟ್ಟಣ ಪಂಚಾಯಿತಿ ವತಿಯಿಂದ ಫಾಗಿಂಗ್ ಕಾರ್ಯಾಚರಣೆ ಕೈಗೊಳ್ಳಲಾಗಿದೆ.



ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮವಾಗಿ ಫಾಗಿಂಗ್ ವ್ಯವಸ್ಥೆ ಮಾಡಿದ್ದು, ಪೌರಕಾರ್ಮಿಕರು ದ್ವಿಚಕ್ರ ವಾಹನಗಳಲ್ಲಿ ಫಾಗಿಂಗ್ ಯಂತ್ರಗಳನ್ನು ಅಳವಡಿಸಿಕೊಂಡು ಪಟ್ಟಣದ ಪ್ರತಿಯೊಂದು ಬಡಾವಣೆಗಳಿಗೂ ಸಂಚರಿಸಿ ಹೊಗೆ ಸಿಂಪಡಣೆ ಮಾಡುತ್ತಿರುವುದು ಕಂಡುಬರುತ್ತಿದೆ.

ಸಂಜೆ ಹಾಗೂ ಬೆಳಗಿನ ಸಮಯದಲ್ಲಿ ಸೊಳ್ಳೆಗಳ ಹಾವಳಿ ಹೆಚ್ಚಾಗುವ ಹಿನ್ನೆಲೆಯಲ್ಲಿ ಪ್ರಮುಖ ರಸ್ತೆಗಳು, ಜನವಸತಿ ಪ್ರದೇಶಗಳು, ಚರಂಡಿಗಳ ಸುತ್ತಮುತ್ತ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಫಾಗಿಂಗ್ ಕಾರ್ಯಾಚರಣೆ ನಡೆಸಲಾಗುತ್ತಿದೆ. ಇದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ನಿಯಂತ್ರಣ–ಕ್ಕೆ ಸಹಕಾರಿಯಾಗಲಿದೆ ಎಂಬ ನಿರೀಕ್ಷೆ ಸಾರ್ವಜನಿಕರಲ್ಲಿ ಮೂಡಿದೆ.

ಈ ಕುರಿತು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಮಾತನಾಡಿ, ಪಟ್ಟಣದಲ್ಲಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ಇಲಾಖೆ ವತಿಯಿಂದ ನಿಯಮಿತವಾಗಿ ಫಾಗಿಂಗ್ ಕಾರ್ಯಾಚರಣೆ ನಡೆಸಲಾಗುತ್ತಿದೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಪಟ್ಟಣದ ಎಲ್ಲಾ ಬಡಾವಣೆಗಳಲ್ಲಿಯೂ ಹಂತ ಹಂತವಾಗಿ ಫಾಗಿಂಗ್ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಆದರೆ ಕೇವಲ ಪಟ್ಟಣ ಪಂಚಾಯಿತಿ ವತಿಯಿಂದ ಫಾಗಿಂಗ್ ಮಾಡಿದರೆ ಮಾತ್ರ ಸೊಳ್ಳೆಗಳ ಸಂಪೂರ್ಣ ನಿಯಂತ್ರಣ ಸಾಧ್ಯವಿಲ್ಲ. ಸಾರ್ವಜನಿಕರು ತಮ್ಮ ಮನೆಗಳ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ತೆಂಗಿನ ಚಿಪ್ಪು, ಹಳೆಯ ಟೈರ್, ಖಾಲಿ ಡಬ್ಬಗಳು ಹಾಗೂ ನೀರು ಸಂಗ್ರಹವಾಗುವ ವಸ್ತುಗಳನ್ನು ತೆರವುಗೊಳಿ